ಸಂಪುಟ: 11 ಸಂಚಿಕೆ: 146 ಪುಟ: 4+2 ಬೆಲೆ : 3.00 ಭಾನುವಾರ ಜುಲೈ 12, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 146 Pages : 4+2 Rate : 3.00 Sunday July 12, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಎಸ್ಐಆರ್ ಪ್ರಕ್ರಿಯೆ ದುರ್ಬಳಕೆ ಆರೋಪ; ಸ್ಲೀಪರ್ ಸೆಲ್, ಸಚಿವ ಸಂಪುಟ ವಿಳಂಬಕ್ಕೆ ಪ್ರಹ್ಲಾದ್ ಜೋಶಿ ವಾಗ್ದಾಳಿ

# ನಕಲಿ ಮತದಾರರ ಸೇರ್ಪಡೆಗೆ ಕಾಂಗ್ರೆಸ್ ಕುಮ್ಮಕ್ಕು..!

**ವಿಜಯಸಾಕ್ಷಿ ಸುದ್ದಿ, ಗದಗ**

ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯನ್ನು ಕಾಂಗ್ರೆಸ್ ಸರ್ಕಾರ ದುರುಪಯೋಗಪಡಿಸಿಕೊಂಡು ನುಸುಳುಕೋರರು ಹಾಗೂ ನಕಲಿ ಮತದಾರರನ್ನು ಸೇರಿಸಲು ಪ್ರಯತ್ನಿಸುತ್ತಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದರು.



ನಗರದ ಬಿಜೆಪಿ ಕಚೇರಿಯಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣಾ ಆಯೋಗದ ಮಾರ್ಗಸೂಚಿಗಳಿಗೆ ವಿರುದ್ಧವಾಗಿ ಶಾಶ್ವತ ನಿವಾಸ ಪ್ರಮಾಣಪತ್ರ ನೀಡುವ ನಿಯಮಗಳನ್ನು ಸಡಿಲಗೊಳಿಸಿರುವುದು ಅನುಮಾನಕ್ಕೆ ಕಾರಣವಾಗಿದೆ.

ಯಾವುದೇ ಕಾನೂನಾತ್ಮಕ ದಾಖಲೆಗಳಿಲ್ಲದೆ ಮೌಖಿಕ ಸಾಕ್ಷ್ಯದ ಆಧಾರದ ಮೇಲೆ ಪ್ರಮಾಣಪತ್ರ ನೀಡಲು ಅವಕಾಶ ಕಲ್ಪಿಸಿರುವುದು ನಕಲಿ ಮತದಾರರ ಸೇರ್ಪಡೆಗೆ ದಾರಿ ಮಾಡಿಕೊಡಲಿದೆ ಎಂದು ದೂರಿದರು.

ರಾಜ್ಯದ ಶೇ.80ರಿಂದ 90ರಷ್ಟು ಮನೆಗಳಿಗೆ ಎಸ್ಐಆರ್ ನಮೂನೆಗಳು ತಲುಪಿವೆ ಎಂಬ ಅಧಿಕಾರಿಗಳ ಹೇಳಿಕೆ ವಾಸ್ತವಕ್ಕೆ ದೂರವಾಗಿದೆ. ಅನೇಕ ಕಡೆಗಳಲ್ಲಿ ಬಿಎಲ್ಒಗಳು ಮನೆಮನೆಗೆ ತೆರಳಿ ನಮೂನೆ ವಿತರಿಸುತ್ತಿಲ್ಲ. ಜಿಲ್ಲಾಧಿಕಾರಿಗಳು ಈ ಬಗ್ಗೆ ತಕ್ಷಣ ಗಮನ ಹರಿಸಬೇಕು ಎಂದು ಆಗ್ರಹಿಸಿದರು.

ಕಾಂಗ್ರೆಸ್ ಆಡಳಿತಕ್ಕೆ ಬಂದಾಗಲೆಲ್ಲ ಸ್ಲೀಪರ್ ಸೆಲ್‌ಗಳು ಸಕ್ರಿಯವಾಗುತ್ತವೆ ಎಂದು ಆರೋಪಿಸಿದ ಜೋಶಿ, ಹಾನಗಲ್ ಘಟನೆ ಹಾಗೂ ಮಾದಕ ವಸ್ತುಗಳ ಜಾಲದ ಬಗ್ಗೆ ಸರ್ಕಾರದ ಮೌನವನ್ನು ಪ್ರಶ್ನಿಸಿದರು.

ಕೆಪಿಎಸ್‌ಸಿ ಸಂವಿಧಾನಬದ್ಧ ಸಂಸ್ಥೆಯಾಗಿದ್ದು, ಅದರಲ್ಲಿರುವ ಲೋಪಗಳನ್ನು ಸರಿಪಡಿಸಬೇಕೇ ಹೊರತು ಸಂಸ್ಥೆಯನ್ನೇ ದುರ್ಬಲಗೊಳಿಸುವುದು ಸರಿಯಲ್ಲ ಎಂದು ಹೇಳಿದರು. ಆರ್‌ಎಸ್‌ಎಸ್ ಕುರಿತು ಕೇಳಿದ ಪ್ರಶ್ನೆಗೆ, ಶತಮಾನದ ಇತಿಹಾಸವಿರುವ ಸಂಘಟನೆ ತನ್ನ ಬಗ್ಗೆ ತಾನೇ ಉತ್ತರಿಸಿಕೊಳ್ಳುವ ಸಾಮರ್ಥ್ಯ ಹೊಂದಿದೆ ಎಂದು ಪ್ರತಿಕ್ರಿಯಿಸಿದರು.


> **ಎಸ್ಐಆರ್ ಪ್ರಕ್ರಿಯೆಯ ಹೆಸರಿನಲ್ಲಿ ಕಾಂಗ್ರೆಸ್ ನುಸುಳುಕೋರರು ಹಾಗೂ ನಕಲಿ ಮತದಾರರನ್ನು ಮತದಾರರ ಪಟ್ಟಿಗೆ ಸೇರಿಸುವ ಪ್ರಯತ್ನ ನಡೆಸುತ್ತಿದೆ.**
> - **ಪ್ರಹ್ಲಾದ್ ಜೋಶಿ,** ಕೇಂದ್ರ ಸಚಿವ

ಈ ಸಂದರ್ಭದಲ್ಲಿ ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವರಾದ ಸಿ.ಸಿ ಪಾಟೀಲ, ಮುರುಗೇಶ್ ನಿರಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಇದ್ದರು.

## ಮಂತ್ರಿಮಂಡಲ ವಿಳಂಬಕ್ಕೆ ಟೀಕೆ

**ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದು 40 ದಿನಗಳಾದರೂ ಸಚಿವ ಸಂಪುಟ ವಿಸ್ತರಣೆ ಆಗದಿರುವುದನ್ನು ಟೀಕಿಸಿದ ಜೋಶಿ, ಕಾಂಗ್ರೆಸ್ ಆಡಳಿತದಲ್ಲಿ ಸಮನ್ವಯದ ಕೊರತೆ ಸ್ಪಷ್ಟವಾಗಿದೆ. ಆಡಳಿತದ ಜವಾಬ್ದಾರಿಗಿಂತ ರಾಜಕೀಯ ಗೊಂದಲವೇ ಹೆಚ್ಚಾಗಿದೆ ಎಂದು ಲೇವಡಿ ಮಾಡಿದರು.**

## ಓವರ್‌ಲೋಡ್ ಎಂ-ಸ್ಯಾಂಡ್, ಮರಳು ಸಾಗಣೆ ಮೇಲೆ ಪೊಲೀಸ್ ದಾಳಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಮೂಲಕ ಮಿತಿಮೀರಿದ (ಓವರ್‌ಲೋಡ್) ಎಂ-ಸ್ಯಾಂಡ್ ಹಾಗೂ ಮರಳು ಸಾಗಣೆ ಮಾಡುತ್ತಿದ್ದ ವಾಹನಗಳ ವಿರುದ್ಧ ಪೊಲೀಸರು ಕಾರ್ಯಾಚರಣೆ ನಡೆಸಿ 3 ಟಿಪ್ಪರ್‌ಗಳು ಹಾಗೂ 1 ಲಾರಿಯನ್ನು ವಶಕ್ಕೆ ಪಡೆದಿದ್ದಾರೆ.

ಶುಕ್ರವಾರ ಮಧ್ಯರಾತ್ರಿಯಿಂದ ಶನಿವಾರ ನಸುಕಿನವರೆಗೆ ನಡೆದ ಕಾರ್ಯಾಚರಣೆಯಲ್ಲಿ, ಅಡರಕಟ್ಟಿ ಗ್ರಾಮದಿಂದ ಸುಮಾರು 5 ಟನ್ ಅಧಿಕ ಮರಳು ಸಾಗಿಸುತ್ತಿದ್ದ ಲಾರಿ, ಮಾಗಡಿ, ಹುಲ್ಲೂರು ಹಾಗೂ ಬೆಳ್ಳಟ್ಟಿ ಗ್ರಾಮಗಳಿಂದ ಹೆಚ್ಚುವರಿ ಎಂ-ಸ್ಯಾಂಡ್ ಹೊತ್ತೊಯ್ಯುತ್ತಿದ್ದ ಮೂರು ಟಿಪ್ಪರ್‌ಗಳನ್ನು ತಡೆದು ವಶಪಡಿಸಿಕೊಳ್ಳಲಾಯಿತು.

ಓವರ್‌ಲೋಡ್ ಸಾಗಣೆ ಕುರಿತು ಅಗತ್ಯ ಕ್ರಮ ಕೈಗೊಳ್ಳಲು ಜಿಲ್ಲಾ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಭೂವಿಜ್ಞಾನಿಗಳಿಗೆ ಮಾಹಿತಿ ನೀಡಲಾಗಿದೆ.

ಕಾರ್ಯಾಚರಣೆಯಲ್ಲಿ ಪಿಎಸ್ಐ ನಾಗರಾಜ ಗಡದ, ಕ್ರೈಂ ಪಿಎಸ್ಐ ಟಿ.ಕೆ. ರಾಥೋಡ್ ಹಾಗೂ ಪೊಲೀಸ್ ಸಿಬ್ಬಂದಿ ಭಾಗವಹಿಸಿದ್ದರು.

# ಜು.13ಕ್ಕೆ ಎಸ್‌ಡಿಪಿಐ ನಾಯಕರ ಸಮಾವೇಶ




**ವಿಜಯಸಾಕ್ಷಿ ಸುದ್ದಿ, ಗದಗ**

ಸೋಷಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ (ಎಸ್‌ಡಿಪಿಐ) ವತಿಯಿಂದ ಜುಲೈ 13ರಂದು ಬೆಳಿಗ್ಗೆ 11.30ಕ್ಕೆ ನಗರದ ಕನಕ ಭವನದಲ್ಲಿ ಮಧ್ಯ ಕರ್ನಾಟಕ ಭಾಗದ ನಾಯಕರ ಮಹತ್ವದ ಸಮಾವೇಶ ನಡೆಯಲಿದೆ ಎಂದು ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಅಪ್ಸರ್ ಕೊಡ್ಲಿಪೇಟೆ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಷ್ಟ್ರೀಯ ಅಧ್ಯಕ್ಷ ಎಂ.ಕೆ. ಫೈಝಿ ಅವರಿಗೆ ಅಂದು ಮುಳುಗುಂದ ನಾಕಾ ವೃತ್ತದಲ್ಲಿ ಅದ್ದೂರಿ ಸ್ವಾಗತ ಕೋರಲಾಗುವುದು. ಸಮಾವೇಶದಲ್ಲಿ ರಾಷ್ಟ್ರೀಯ ಉಪಾಧ್ಯಕ್ಷ ಮೊಹಮ್ಮದ್ ಶಫಿ, ರಾಷ್ಟ್ರೀಯ ಕಾರ್ಯದರ್ಶಿ ಯಾ ಮೊಹಿದ್ದೀನ್, ರಾಷ್ಟ್ರೀಯ ಸಮಿತಿ ಸದಸ್ಯ ಅಬ್ದುಲ್ ಹನ್ನಾನ್, ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್, ರಾಜ್ಯ ಕಾರ್ಯದರ್ಶಿ ಅಪ್ಸರ್ ಕೆ.ಆರ್. ನಗರ ಹಾಗೂ ರಾಜ್ಯ ಸಮಿತಿ ಸದಸ್ಯ ಫಯಾಜ್ ಅರಿಹಂತ್ ಸೇರಿದಂತೆ ಹಲವು ನಾಯಕರು ಭಾಗವಹಿಸಲಿದ್ದಾರೆ ಎಂದು ಹೇಳಿದರು. ಮಧ್ಯಾಹ್ನ 1.30ಕ್ಕೆ ರಾಷ್ಟ್ರೀಯ ಅಧ್ಯಕ್ಷ ಎಂ.ಕೆ. ಫೈಝಿ ನೇತೃತ್ವದಲ್ಲಿ ಸುದ್ದಿಗೋಷ್ಠಿಯೂ ನಡೆಯಲಿದೆ ಎಂದು ತಿಳಿಸಿದರು.


ಈ ವೇಳೆ ಎಸ್ಐಆರ್ (Special Intensive Revision) ಪ್ರಕ್ರಿಯೆಯನ್ನು ತೀವ್ರವಾಗಿ ವಿರೋಧಿಸಿದ ಅಪ್ಸರ್ ಕೊಡ್ಲಿಪೇಟೆ, ಇದು ಮತದಾರರ ಹಕ್ಕಿಗೆ ಧಕ್ಕೆ ತರುವ ಕ್ರಮವಾಗಿದ್ದು, ಸರ್ಕಾರ ಕೂಡಲೇ ಈ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಬೇಕು ಎಂದು ಆಗ್ರಹಿಸಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಅಗತ್ಯವಿದ್ದರೂ ನೈಜ ಮತದಾರರ ಹೆಸರುಗಳನ್ನು ಕೈಬಿಡಬಾರದು ಎಂದು ಒತ್ತಾಯಿಸಿದರು.

ಬಿಎಲ್‌ಒಗಳ ಮೇಲಿನ ಹೆಚ್ಚುವರಿ ಕೆಲಸದ ಒತ್ತಡದ ಬಗ್ಗೆಯೂ ಕಳವಳ ವ್ಯಕ್ತಪಡಿಸಿದ ಅವರು, ಮುಂಬರುವ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳಲ್ಲಿ ಜನರು ಜನವಿರೋಧಿ ನೀತಿಗಳಿಗೆ ತಕ್ಕ ಉತ್ತರ ನೀಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಎಸ್‌ಡಿಪಿಐ ರಾಜ್ಯ ಕಾರ್ಯದರ್ಶಿ ಅಪ್ಸರ್ ಕೆ.ಆರ್. ನಗರ, ಜಿಲ್ಲಾ ಅಧ್ಯಕ್ಷ ಬಿಲಾಲ್ ಗೋಕಾವಿ, ಜಿಲ್ಲಾ ಉಪಾಧ್ಯಕ್ಷ ಹಿದಾಯತುಲ್ಲಾ ಕಾಗದಗಾರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಫ್ಘಾನ್ ತರರ್ಫ್ದಾ, ಗದಗ ವಿಧಾನಸಭಾ ಕ್ಷೇತ್ರ ಸಮಿತಿ ಅಧ್ಯಕ್ಷ ಮುಸ್ತಾಕ್ ಹೊಸಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಯಾರೂ ಆತಂಕ ಪಡುವ ಅಗತ್ಯವಿಲ್ಲ; ರಾಚೋಟೇಶ್ವರ ಶ್ರೀಗಳ ಸಂದೇಶ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಅಂತೂರು-ಬೆಂತೂರು ಗ್ರಾಮದಲ್ಲಿ ಲೋಕಕಲ್ಯಾಣಕ್ಕಾಗಿ 33 ದಿನಗಳ ಶಿವಯೋಗ ಸಮಾಧಿ ಅನುಷ್ಠಾನ ನಡೆಸಿದ ಪೂಜ್ಯ ಶ್ರೀ ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ಆರೋಗ್ಯ ವಿಚಾರಿಸಿ ಭಕ್ತರು ಆಶೀರ್ವಾದ ಪಡೆದರು.

ಈ ವೇಳೆ ತಮ್ಮ ಆರೋಗ್ಯದ ಕುರಿತು ಭಕ್ತರಿಗೆ ಸಂದೇಶ ನೀಡಿದ ಶ್ರೀಗಳು, ನನ್ನ ಆರೋಗ್ಯದಲ್ಲಿ ಯಾವುದೇ ಗಂಭೀರ ಸಮಸ್ಯೆ ಇಲ್ಲ. ಆರೋಗ್ಯದಲ್ಲಿ ಸ್ವಲ್ಪ ಏರುಪೇರು ಕಂಡು ಬಂದ ಹಿನ್ನೆಲೆಯಲ್ಲಿ ವೈದ್ಯರ ಸಲಹೆಯಂತೆ ಗದಗ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದೇನೆ. ಯಾರೂ ಆತಂಕ ಪಡುವ ಅಗತ್ಯವಿಲ್ಲ. ನಿಮ್ಮೆಲ್ಲರ ಪ್ರಾರ್ಥನೆ, ಆಶೀರ್ವಾದ ಮತ್ತು ಪ್ರೀತಿಗೆ ನಾನು ಸದಾ ಋಣಿಯಾಗಿದ್ದೇನೆ ಎಂದು ತಿಳಿಸಿದರು.

ಇನ್ನೂ ಕೆಲವು ದಿನಗಳಲ್ಲಿ ಸಂಪೂರ್ಣ ಚೇತರಿಸಿಕೊಂಡು ಅಂತೂರು-ಬೆಂತೂರು ಮಠಕ್ಕೆ ಮರಳಿ ಭಕ್ತರ ದರ್ಶನಕ್ಕೆ ಲಭ್ಯವಾಗುತ್ತೇನೆ ಎಂದು ಶ್ರೀಗಳು ಭರವಸೆ ನೀಡಿದರು.

ಅಲ್ಲದೆ, ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಲೋಕಕಲ್ಯಾಣಕ್ಕಾಗಿ ಎಲ್ಲರೂ ಪ್ರಾರ್ಥನೆಯನ್ನು ಮುಂದುವರಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲಾ ಗೌರವಾಧ್ಯಕ್ಷ ನಿಂಗನಗೌಡ ಎಸ್. ಮಾಲಿಪಾಟೀಲ, ಜಿಲ್ಲಾ ಉಪಾಧ್ಯಕ್ಷ ಮಾರುತಿ ಈಳಗೇರ, ಕರವೇ ಯುವ ಮುಖಂಡರಾದ ರಾಹುಲ್ ತೆರದಾಳ, ಹುಲಿಗೇಶ ಚೌಡಣ್ಣವರ, ಮಲ್ಲಿಕಾರ್ಜುನ ಈಳಗೇರ, ಶ್ರೀನಿವಾಸ ಶೇಖರ ಇಳಗೇರ ಸೇರಿದಂತೆ ಹಲವಾರು ಯುವ ಮುಖಂಡರು ಉಪಸ್ಥಿತರಿದ್ದರು.

## ಗುರಿ ಸಾಧಿಸಲು ನಿರಂತರ ಪ್ರಯತ್ನ ಇರಲಿ: ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ

**ವಿಜಯಸಾಕ್ಷಿ ಸುದ್ದಿ, ರಾಯಚೂರು**

ಉತ್ತಮ ಶಿಕ್ಷಣದೊಂದಿಗೆ ವಿದ್ಯಾರ್ಥಿಗಳು ಗುರಿಯನ್ನು ಇಟ್ಟುಕೊಳ್ಳಬೇಕು. ಆ ಗುರಿ ಸಾಧಿಸಲು ನಿರಂತರ ಪ್ರಯತ್ನ ಮಾಡಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಹೇಳಿದರು.

ಜುಲೈ 10ರ ಶುಕ್ರವಾರ ದಂದು ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬೆಂಗಳೂರಿನ ಮಹಿಳಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಾಲೇಜ್ ಶಿಕ್ಷಣ ಇಲಾಖೆ ರಾಯಚೂರು ಇವರ ಸಂಯೋಗದಲ್ಲಿ ವಿದ್ಯಾರ್ಥಿ, ವಿದ್ಯಾರ್ಥಿನಿಯೊಂದಿಗೆ ಸಂವಾದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಕಷ್ಟಪಟ್ಟು ಓದಬೇಕು. ಎಷ್ಟೇ ಸೋತರು ಕಳಿಯೋದು ಬಿಡಬಾರದು. ದಿನನಿತ್ಯದ ಪ್ರಚಲಿತದ ಘಟನೆಗಳನ್ನು ಗಮನಿಸಬೇಕು. ವಿದ್ಯಾರ್ಥಿಗಳು ಪ್ರತಿದಿನವೂ ಪತ್ರಿಕೆಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು.

ಜ್ಞಾನವನ್ನು ಪಡೆದವರು ಜಗತ್ತುನ ಆಳ್ವಿಕೆ ಮಾಡಬಹುದು. ಸ್ತ್ರೀ ಶೋಷಣೆ ವಿರುದ್ಧ ಡಾ.ಬಿ.ಆರ್. ಅಂಬೇಡ್ಕರ್, ಬಸವಣ್ಣನವರು ಹೋರಾಟ ಮಾಡಿದ್ದಾರೆ. ಅವರನ್ನು ಪ್ರೇರಣೆಯಾಗಿ ಪಡೆಯಬೇಕು. ಒಳ್ಳೆಯ ಸ್ನೇಹಿತರ ಗುಂಪು ಮಾಡಬೇಕು. ಸಮಾಜ ಆದರ್ಶ ವ್ಯಕ್ತಿಯಾಗಿ ಬಾಳಬೇಕು. ಮೊಬೈಲ್ ಬಳಕೆಯನ್ನು ಸರಿಯಾಗಿ ಮಾಡಿಕೊಳ್ಳಬೇಕು. ಸಮಾಜದಲ್ಲಿ ಅತ್ಯಾಚಾರ ಪ್ರಕರಣಗಳು ಹೆಚ್ಚಾಗುತ್ತಿವೆ. ಅದಕ್ಕಾಗಿ ಹೆಣ್ಣುಮಕ್ಕಳು ಜಾಗೃತಿ ವಹಿಸಬೇಕು. ಸಮಯವನ್ನು ಸರಿಯಾಗಿ ಸದ್ಬಳಿಕೆ ಮಾಡಿಕೊಳ್ಳಬೇಕು. ಇಂಟರ್ನೆಟ್ ಮೇಲೆ ಗೆಳೆತನ ಮಾಡಬಾರದು. ಮಕ್ಕಳು, ಮಹಿಳೆಯರು ಇಂಟರ್ನೆಟ್ ಮೂಲಕ ಮಾರಾಟ ಆಗುತ್ತಿದ್ದಾರೆ. ಹೆಣ್ಣುಮಕ್ಕಳು ಮೇಲೆ ಯಾರೇ ಬ್ಲಾಕ್ ಮೇಲ್ ಮಾಡಬಾರದು. ಒಂದುವೇಳೆ ಮಾಡಿದಲ್ಲಿ ಹತ್ತಿರದ ಪೊಲೀಸ್ ಠಾಣೆಗೆ ದೂರು ನೀಡಬೇಕು.

ಮಹಿಳೆಯರಿಗಾಗಿ ಮಹಿಳಾ ಪೊಲೀಸ್ ಠಾಣೆ ಇದೆ. ಅದನ್ನು ಉಪಯೋಗಿಸಬೇಕು ಎಂದರು. ವಿದ್ಯಾರ್ಥಿನಿಯರು ಧೈರ್ಯದಿಂದ ಇರಬೇಕು. ಧೈರ್ಯದಿಂದ ಮಾತನಾಡಿದಾಗ ಮಾತ್ರ ಯಾವುದೇ ಸಮಸ್ಯೆಯನ್ನು, ಸವಾಲುಗಳನ್ನು ಎದುರಿಸಲು ಸಾಧ್ಯವಾಗುತ್ತದೆ ಎಂದು ಅವರು ಸಲಹೆ ಮಾಡಿದರು.

### ಅಣ್ಣಿಗೇರಿ ಪ್ರತಿಭಾ ಪ್ರತಿಷ್ಠಾನದಿಂದ ನಾಲ್ಕು ಶಾಲೆಗಳ ಮೇಧಾವಿ ವಿದ್ಯಾರ್ಥಿಗಳಿಗೆ ಸನ್ಮಾನ

# ಶಾಲೆಯಲ್ಲೇ ಪ್ರತಿಭೆಗೆ ಗೌರವ

**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸುವ ಮೂಲಕ ಇತರ ಮಕ್ಕಳಲ್ಲೂ ಸಾಧನೆಯ ಹಂಬಲ ಮೂಡಿಸುವ ಕಾರ್ಯ ಸಮಾಜದ ಭವಿಷ್ಯಕ್ಕೆ ಬಲ ತುಂಬುತ್ತದೆ ಎಂದು ನಾಗಾವಿ ಗ್ರಾಮದ ಚಿಂತಕ ಬಸವಣ್ಣೆಪ್ಪ ಚಿಂಚಲಿ ಹೇಳಿದರು.



ಗದಗ ತಾಲೂಕಿನ ನಾಗಾವಿಯ ವಿರುಪಾಕ್ಷಪ್ಪ ಸೋಮಪ್ಪ ಚಿಂಚಲಿ ಉನ್ನತೀಕರಿಸಿದ ಸರ್ಕಾರಿ ಪ್ರೌಢ ಶಾಲೆಯಲ್ಲಿ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ ವತಿಯಿಂದ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ಐದು ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಅವರು ಮಾತನಾಡಿದರು.

ಪ್ರತಿಭಾವಂತರನ್ನು ಸನ್ಮಾನಿಸುವುದು ಮಾತ್ರವಲ್ಲ, ನೀವೂ ಇವರಂತೆ ಸಾಧನೆ ಮಾಡಬಹುದು ಎಂಬ ಆತ್ಮವಿಶ್ವಾಸವನ್ನು ಇತರ ವಿದ್ಯಾರ್ಥಿಗಳಲ್ಲಿ ಮೂಡಿಸುವ ಕೆಲಸವನ್ನು ಪ್ರತಿಷ್ಠಾನ ಮಾಡುತ್ತಿದೆ.

ಇಂತಹ ಸಮಾಜಮುಖಿ ಕಾರ್ಯಕ್ರಮಗಳು ಶಿಕ್ಷಣದ ಬಗ್ಗೆ ಆಸಕ್ತಿ ಹೆಚ್ಚಿಸುವುದರ ಜೊತೆಗೆ ಗ್ರಾಮೀಣ ವಿದ್ಯಾರ್ಥಿಗಳಿಗೆ ಹೊಸ ಪ್ರೇರಣೆಯಾಗುತ್ತವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಾಗಾವಿ ಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ರುಕ್ಷಾನಾ ನದಾಫ, ಶ್ರೀದೇವಿ ಮಡಿವಾಳರ, ವಿಶ್ವನಾಥ ಗೋಲಪ್ಪನವರ, ಬಸಮ್ಮ ಪಾಟೀಲ ಹಾಗೂ ಶೈನಾಜಭೀ ಗೋಡಿಯವರ ಅವರಿಗೆ ನಗದು ಬಹುಮಾನ, ಅಭಿನಂದನಾ ಪತ್ರ, ಕಾಲೇಜು ಬ್ಯಾಗ್ ಹಾಗೂ ಸಿಹಿ ಪೊಟ್ಟಣ ನೀಡಿ ಗೌರವಿಸಲಾಯಿತು.

ಪ್ರತಿಷ್ಠಾನದ ಶಿವಾನಂದ ಕಟ್ಟಿ ಪ್ರತಿಷ್ಠಾನದ ಕಾರ್ಯಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು.

ಎಸ್‌ಡಿಎಂಸಿ ಅಧ್ಯಕ್ಷ ಮಲ್ಲಪ್ಪ ಗೋಲಪ್ಪನವರ, ಮುಖ್ಯೋಪಾಧ್ಯಾಯಿನಿ ಜಯಶ್ರೀ ಏಕಬೋಟೆ, ನೇಹಾ ಖಟವಟೆ, ಮಂಜುಳಾ ಕರಿಗಾರ, ಪ್ರಸನ್ ಗಡಾದ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಇದೇ ವೇಳೆ ಶಿರುಂಜ, ಯಲಿಶಿರೂರ ಹಾಗೂ ಸೊರಟೂರ ಸರ್ಕಾರಿ ಪ್ರೌಢ ಶಾಲೆಗಳಲ್ಲೂ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಅಣ್ಣಿಗೇರಿ ಪ್ರತಿಭಾ ಪ್ರತಿಷ್ಠಾನದಿಂದ ಸನ್ಮಾನಿಸಿ ಗೌರವಿಸಲಾಯಿತು. ನಾಲ್ಕೂ ಶಾಲೆಗಳಲ್ಲಿ ನಡೆದ ಪ್ರತಿಭಾ ಪುರಸ್ಕಾರ ಸಮಾರಂಭಗಳು ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ಬೆಳೆಸುವ ಜೊತೆಗೆ ಶಿಕ್ಷಣದ ಮಹತ್ವವನ್ನು ಸಾರಿದವು.

## ಶಿವಯೋಗಿ ಶ್ರೀಗಳ ಆರೋಗ್ಯ ವಿಚಾರಿಸಿದ ಕಲ್ಲಯ್ಯಜ್ಜ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಅಂತೂರು-ಬೆಂತೂರು ಗ್ರಾಮದಲ್ಲಿ ಲೋಕಕಲ್ಯಾಣಕ್ಕಾಗಿ 33 ದಿನಗಳ ಕಾಲ ಶಿವಯೋಗ ಸಮಾಧಿ ಅನುಷ್ಠಾನ ಕೈಗೊಂಡಿದ್ದ ಪೂಜ್ಯ ಶ್ರೀ ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ಆರೋಗ್ಯವನ್ನು ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪರಮಪೂಜ್ಯ ಡಾ. ಕಲ್ಲಯ್ಯಜ್ಜನವರು ಭೇಟಿ ನೀಡಿ ವಿಚಾರಿಸಿದರು.

ಈ ವೇಳೆ ರಾಚೋಟೇಶ್ವರ ಮಹಾಸ್ವಾಮಿಗಳ ದರ್ಶನ ಪಡೆದು ಆಶೀರ್ವಾದ ಹಾಗೂ ಶ್ರೀರಕ್ಷೆ ಸ್ವೀಕರಿಸಿದ ಕಲ್ಲಯ್ಯಜ್ಜನವರು, ಪರಮಾತ್ಮನ ಕೃಪೆಯಿಂದ ಶ್ರೀಗಳು ಶೀಘ್ರ ಸಂಪೂರ್ಣ ಗುಣಮುಖರಾಗಲಿ. ಸಮಾಜದಲ್ಲಿ ಸುಖ, ಶಾಂತಿ ಮತ್ತು ಲೋಕಕಲ್ಯಾಣ ನೆಲೆಸಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಗೌರವಾಧ್ಯಕ್ಷ ನಿಂಗನಗೌಡ ಮಾಲಿಪಾಟೀಲ, ರಾಹುಲ್ ತೆರದಾಳ, ಮಾರ್ಕಂಡಯ್ಯ ಆಟೋದ, ಬಸಯ್ಯ ಕೊಪ್ಪಳ, ಮುತ್ತು ಶಾಸ್ತ್ರಿ ಹಿರೇಕೊಪ್ಪ, ಮಾಂತೇಶ ಹಿರೇಮಠ, ಬಸಯ್ಯ ಹಿರೇಮಠ, ಪ್ರಶಾಂತ್ ರೋಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.



## ವಿದ್ಯಾರ್ಥಿಗಳೊಂದಿಗೆ ಪರಿಸರ ಸಂರಕ್ಷಣೆಯ ಅಭಿಯಾನ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲ್ಲೂಕಿನ ತಂಬ್ರಹಳ್ಳಿ ಪೊಲೀಸ್ ಠಾಣೆ ಹಾಗೂ ವಸತಿ ಗೃಹದ ಆವರಣದಲ್ಲಿ ಕೆಪಿಜಿ ಶಾಲೆಯ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿ ಸುಮಾರು 200 ಸಸಿಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಯ ಸಂಕಲ್ಪ ಕೈಗೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅಕ್ಕಿ ತೋಟೇಶ್, ಮುಂದಿನ ಪೀಳಿಗೆಗೂ ಉತ್ತಮ ಪರಿಸರವನ್ನು ಉಳಿಸಬೇಕಾದರೆ ಪ್ರತಿಯೊಬ್ಬರೂ ಸಸಿ ನೆಟ್ಟು ಬೆಳೆಸುವ ಜವಾಬ್ದಾರಿ ಹೊತ್ತುಕೊಳ್ಳಬೇಕು ಎಂದು ಹೇಳಿದರು.

ಪರಿಸರಕ್ಕಾಗಿ ನಾವು, ನಮಗಾಗಿ ಪರಿಸರ ಎಂಬ ಸಂದೇಶದೊಂದಿಗೆ ಪರಿಸರ ಸಂರಕ್ಷಣೆಯ ಮಹತ್ವವನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಪಿಎಸ್ಐ ನಾಗರಾಜ ಕೊಟಗಿ, ತಾಲೂಕು ಗ್ಯಾರಂಟಿ ಸಮಿತಿ ಸದಸ್ಯ ಜಿ. ಗಿರೀಶ್, ವಿಎಸ್‌ಎಸ್‌ಎನ್ ಮಾಜಿ ಅಧ್ಯಕ್ಷ ಮಂಜುನಾಥ ಪಾಟೀಲ್, ಬಣಕಾರ ಕೊಟ್ರೇಶ್, ಪೊಲೀಸ್ ಸಿಬ್ಬಂದಿಗಳಾದ ಪ್ರಸನ್ನ, ಕಿರಣ್, ಚೇತನ್, ಚೌಡಪ್ಪ, ಕೊಟ್ರೇಶ್, ಗಣೇಶ್, ಹೈಸ್ಕೂಲ್‌ನ ಪ್ರಶಾಂತ ಹಾಗೂ ಗಡ್ಡಿ ಚನ್ನಬಸವ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಸಂಶಿಮಠ ದತ್ತಿ ಉಪನ್ಯಾಸದಲ್ಲಿ ಹಾಲಕೆರೆ ಶ್ರೀಗಳ ಸಂದೇಶ

# ಜೀವನದ ಯಶಸ್ಸು ಹುದ್ದೆಯಲ್ಲ, ಆತ್ಮತೃಪ್ತಿಯಲ್ಲಿ




**ವಿಜಯಸಾಕ್ಷಿ ಸುದ್ದಿ, ಗದಗ**

ಜೀವನದ ನಿಜವಾದ ಮೌಲ್ಯವು ಹುದ್ದೆ, ಅಧಿಕಾರ ಅಥವಾ ಸಂಪತ್ತಿನಲ್ಲಿ ಅಡಗಿಲ್ಲ. ಬದುಕಿನ ಕೊನೆಯಲ್ಲಿ ಯಾವುದೇ ಪಶ್ಚಾತ್ತಾಪವಿಲ್ಲದೆ ಆತ್ಮತೃಪ್ತಿಯಿಂದ ಬದುಕುವುದೇ ನಿಜವಾದ ಯಶಸ್ಸು ಎಂದು ಹಾಲಕೆರೆಯ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದ ಪೂಜ್ಯ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಹೇಳಿದರು.

ನಗರದ ವಾಣಿಜ್ಯ ಭವನದ ಬನಪ್ಪ ಸಂಕಪ್ಪ ಸಂಕಣ್ಣವರ ಸಭಾಭವನದಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ವತಿಯಿಂದ ಲಿಂ. ಪಂಚಾಕ್ಷರಯ್ಯ ಎಸ್. ಸಂಶಿಮಠ ಅವರ ಸ್ಮರಣಾರ್ಥ ಆಯೋಜಿಸಿದ್ದ ಸಂಶಿಮಠ ದತ್ತಿ ಉಪನ್ಯಾಸ ಹಾಗೂ ಸಾಧಕರ ಸನ್ಮಾನ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಯುವಕರು ಸರ್ಕಾರಿ ಉದ್ಯೋಗವನ್ನೇ ಅಂತಿಮ ಗುರಿಯಾಗಿಸಿಕೊಳ್ಳದೆ, ಉದ್ಯಮಶೀಲತೆ ಹಾಗೂ ಸ್ವಯಂ ಉದ್ಯೋಗದತ್ತ ಮುಖ ಮಾಡಬೇಕು. ಸರ್ಕಾರ ಎಲ್ಲರಿಗೂ ಉದ್ಯೋಗ ನೀಡಲು ಸಾಧ್ಯವಿಲ್ಲ. ಹೀಗಾಗಿ ಸ್ವಾವಲಂಬನೆ, ಧೈರ್ಯ ಹಾಗೂ ಹೊಸ ಅವಕಾಶಗಳನ್ನು ಸೃಷ್ಟಿಸಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವಾಣಿಜ್ಯೋದ್ಯಮ ಸಂಸ್ಥೆಗಳು ವ್ಯಾಪಾರಕ್ಕೆ ಮಾತ್ರ ಸೀಮಿತವಾಗದೆ, ಸಮಾಜಮುಖಿ ಚಟುವಟಿಕೆಗಳು, ಪ್ರತಿಭೆಗಳ ಪ್ರೋತ್ಸಾಹ ಹಾಗೂ ಯುವಜನರಿಗೆ ಮಾರ್ಗದರ್ಶನ ನೀಡುವ ಮೂಲಕ ಸಮಾಜ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಬೇಕು. ದೇಹಸಂಪತ್ತು, ವಿಚಾರಸಂಪತ್ತು ಮತ್ತು ಚೈತನ್ಯವೇ ವ್ಯಕ್ತಿಯ ನಿಜವಾದ ಸಂಪತ್ತು ಎಂದು ಶ್ರೀಗಳು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಮಾಜಿ ಅಧ್ಯಕ್ಷ ಸಿದ್ರಾಮಯ್ಯ ಸಂಶಿಮಠ, ಜೀವನ ಮೌಲ್ಯಗಳನ್ನು ಅಳವಡಿಸಿಕೊಂಡು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಗೌರವಿಸುವ ಉದ್ದೇಶದಿಂದ ಈ ದತ್ತಿ ಉಪನ್ಯಾಸ ಹಾಗೂ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ಹಿರಿಯರ ಮಾರ್ಗದರ್ಶನ ಯುವಜನರಿಗೆ ಸ್ಫೂರ್ತಿಯಾಗಿದ್ದು, ಉದ್ಯಮ, ಶಿಕ್ಷಣ, ಕ್ರೀಡೆ ಹಾಗೂ ಸಮಾಜಸೇವೆಯಲ್ಲಿ ಇನ್ನಷ್ಟು ಸಾಧನೆ ಮಾಡಲು ಯುವಕರು ಮುಂದಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ರಾಜ್ಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆಗೈದ ಕ್ರೀಡಾಪಟುಗಳು, ಸೈಕ್ಲಿಸ್ಟ್‌ಗಳು, ತರಬೇತುದಾರರು, ಚಾರ್ಟರ್ಡ್ ಅಕೌಂಟೆಂಟ್‌ಗಳು, ರಕ್ತದಾನ, ಶಿಕ್ಷಣ, ವಿಶೇಷಚೇತನರ ಸೇವೆ, ಆರೋಗ್ಯ ಜಾಗೃತಿ, ರೋಟರಿ ಹಾಗೂ ಲಯನ್ಸ್ ಕ್ಲಬ್ ಪದಾಧಿಕಾರಿಗಳು ಮತ್ತು ಸಮಾಜಸೇವಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸನ್ಮಾನಿತರ ಪರವಾಗಿ ಶ್ರೀಧರ ಧರ್ಮಾಯತ, ಪ್ರವೀಣ ವಾರಕರ, ರಮೇಶ ಶಿಗ್ಲಿ, ಸರೋಜಾ ಕುಲಕರ್ಣಿ, ಮಾಲತಿ ಇನಾಮತಿ, ಪೂಜಾ ಗುಗ್ಗರಿ ಹಾಗೂ ಕವಿತಾ ದಂಡಿನ ಮಾತನಾಡಿದರು.

ಚನ್ನವೀರಪ್ಪ ಹುಣಸಿಕಟ್ಟಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಈಶಣ್ಣ ಮುನವಳ್ಳಿ, ವಿ.ಕೆ. ಗುರುಮಠ, ವಿಜಯಕುಮಾರ ಮಾಟಲದಿನ್ನಿ, ದತ್ತು ಬೇವಿನಕಟ್ಟಿ ಹಾಗೂ ರಾಘವೇಂದ್ರ ಕಾಲವಾಡ ಪರಿಚಯಿಸಿದರು. ದಾನಯ್ಯ ಗಣಾಚಾರಿ ವಂದಿಸಿದರು.

> **ಜೀವನದ ನಿಜವಾದ ಸಂಪತ್ತು ಹುದ್ದೆ ಅಥವಾ ಹಣವಲ್ಲ; ಆತ್ಮತೃಪ್ತಿ, ಸಮಾಜಸೇವೆ ಮತ್ತು ಚೈತನ್ಯವೇ ಮನುಷ್ಯನ ಶ್ರೇಷ್ಠ ಆಸ್ತಿ.**
> **- ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು,** ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠ

ಕಾರ್ಯಕ್ರಮದಲ್ಲಿ ಜಯದೇವ ಮೆಣಸಗಿ, ಪ್ರಕಾಶ ಉಗಲಾಟದ, ಸಿದ್ರಾಮಪ್ಪ ಉಮಚಗಿ, ರಾಘವೇಂದ್ರ ಕಾಲವಾಡ, ಅಶೋಕ ಸಂಕಣ್ಣವರ, ಅರವಿಂದ ಕಾಮತ, ಚಂದ್ರು ಬಾಳಿಹಳ್ಳಿಮಠ ಸೇರಿದಂತೆ ವಾಣಿಜ್ಯೋದ್ಯಮ ಸಂಸ್ಥೆಯ ಪದಾಧಿಕಾರಿಗಳು, ಸದಸ್ಯರು, ಉದ್ಯಮಿಗಳು, ಕ್ರೀಡಾಪಟುಗಳು, ಸಮಾಜಸೇವಕರು ಹಾಗೂ ಗಣ್ಯರು ಉಪಸ್ಥಿತರಿದ್ದರು.

## ಅಭ್ಯುದಯ ಹಾಗೂ ವಿದ್ಯಾರ್ಥಿ ಸಂಸತ್ ಉದ್ಘಾಟನೆ

# ಸತತ ಪರಿಶ್ರಮವೇ ಉಜ್ವಲ ಭವಿಷ್ಯದ ಅಡಿಗಲ್ಲು




**ವಿಜಯಸಾಕ್ಷಿ ಸುದ್ದಿ, ಗದಗ**

ಸತತ ಪರಿಶ್ರಮ, ಶಿಸ್ತು ಮತ್ತು ಆರೋಗ್ಯಯುತ ಜೀವನವೇ ಯಶಸ್ಸಿನ ನಿಜವಾದ ಸೂತ್ರವಾಗಿದ್ದು, ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ತಾವೇ ರೂಪಿಸಿಕೊಳ್ಳುವ ಸಂಕಲ್ಪ ಬೆಳೆಸಿಕೊಳ್ಳಬೇಕು ಎಂದು ಖ್ಯಾತ ಚರ್ಮರೋಗ ತಜ್ಞ ಡಾ. ಸಲೀಂ ಜಮಾದಾರ ಹೇಳಿದರು.

ನಗರದ ಸ್ಟುಡೆಂಟ್ಸ್ ಎಜ್ಯುಕೇಶನ್ ಸಂಸ್ಥೆಯ ಸನ್ಮಾರ್ಗ ಪದವಿ ಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಅಭ್ಯುದಯ ಹಾಗೂ ವಿದ್ಯಾರ್ಥಿ ಸಂಸತ್ ಉದ್ಘಾಟನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಪಿಯುಸಿ ಶಿಕ್ಷಣದ ಎರಡು ವರ್ಷಗಳು ವಿದ್ಯಾರ್ಥಿಗಳ ಜೀವನದ ಮಹತ್ವದ ತಿರುವಾಗಿದ್ದು, ಈ ಅವಧಿಯಲ್ಲಿ ಪಡೆದ ಜ್ಞಾನವನ್ನು ಸಮಾಜದ ಒಳಿತಿಗೆ ಬಳಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ಸನ್ಮಾರ್ಗ ಕಾಲೇಜಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳನ್ನು ಸ್ವಾಗತಿಸಿದ ಸಂಸ್ಥೆಯ ಅಧ್ಯಕ್ಷ ಪ್ರೊ. ರಾಜೇಶ್ ಕುಲಕರ್ಣಿ, ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಸಂಸ್ಥೆ ಬದ್ಧವಾಗಿದೆ. ಉತ್ತಮ ವರ್ತನೆ, ಶಿಸ್ತು ಹಾಗೂ ಪರಿಶ್ರಮದಿಂದ ಮಾತ್ರ ಉಜ್ವಲ ಭವಿಷ್ಯ ನಿರ್ಮಿಸಿಕೊಳ್ಳಲು ಸಾಧ್ಯ ಎಂದು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರೊ. ರೋಹಿತ್ ಒಡೆಯರ್, ವಿದ್ಯಾರ್ಥಿಗಳಲ್ಲಿರುವ ಜ್ಞಾನ ಮತ್ತು ಪ್ರತಿಭೆಯನ್ನು ಅರಳಿಸುವುದೇ ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ. ಭಾರತೀಯ ಸಂಸ್ಕೃತಿ, ವೈಜ್ಞಾನಿಕ ಚಿಂತನೆ ಹಾಗೂ ಮೌಲ್ಯಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಯುವಜನತೆಯ ಮೇಲಿದೆ ಎಂದು ಹೇಳಿದರು.

ಸಮಾರೋಪ ಭಾಷಣ ಮಾಡಿದ ಪ್ರಾಚಾರ್ಯ ಪ್ರೊ. ಪುನೀತ ದೇಶಪಾಂಡೆ, ಕೇವಲ ಹಣ ಸಂಪಾದನೆಯನ್ನೇ ಗುರಿಯಾಗಿಸದೆ ಸಮಾಜಸೇವೆಯ ಮನೋಭಾವ ಬೆಳೆಸಿಕೊಳ್ಳಬೇಕು. ಶ್ರದ್ಧೆ, ಆತ್ಮವಿಶ್ವಾಸ ಹಾಗೂ ನಿರಂತರ ಪರಿಶ್ರಮದಿಂದ ಯಾವುದೇ ಗುರಿಯನ್ನು ಸಾಧಿಸಲು ಸಾಧ್ಯ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್, ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪ್ರೊ. ಪರಶುರಾಮ ಕೊಟ್ನಿಕಲ್ ವಿದ್ಯಾರ್ಥಿ ಸಂಸತ್ ಸದಸ್ಯರಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಮುರಳೀಧರ ಸಂಕನೂರ ಸ್ವಾಗತಿಸಿ ಅತಿಥಿಗಳನ್ನು ಪರಿಚಯಿಸಿದರು. ಪ್ರೊ. ರಘುವೀರ ಕಲಬುರ್ಗಿ ಕಾರ್ಯಕ್ರಮ ನಿರೂಪಿಸಿದರು. ಬಳಿಕ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಮನರಂಜನೆಯ ಜೊತೆಗೆ ಸಾಮಾಜಿಕ ಸಂದೇಶ ಹೊತ್ತ ಸಿನಿಮಾ

# ಕುಡುಕ ನನ್ಮಕ್ಳು ಮೊದಲ ಹಂತದ ಚಿತ್ರೀಕರಣ ಪೂರ್ಣ



**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕಲಾಭೂಮಿ ಕಂಬೈನ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಕುಡುಕ ನನ್ಮಕ್ಳುಟಿ ಚಿತ್ರದ ಮೊದಲ ಹಂತದ ಚಿತ್ರೀಕರಣ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಚಿತ್ರತಂಡ ಇದೀಗ ಎರಡನೇ ಹಂತದ ಚಿತ್ರೀಕರಣಕ್ಕೆ ಸಜ್ಜಾಗಿದೆ.

ತುಂಬಾ ಒಳ್ಳೆಯವರುಟಿ ಎಂಬ ಅಡಿ ಬರಹ ಹೊಂದಿರುವ ಚಿತ್ರದ ಚಿತ್ರೀಕರಣವು ಬೆಂಗಳೂರು ನಗರ ಹಾಗೂ ಹೊರವಲಯಗಳಲ್ಲಿ ಸುಮಾರು 20 ದಿನಗಳ ಕಾಲ ನಡೆದಿದ್ದು, ಕಾಮಿಡಿ ಕಿಲಾಡಿಗಳಾದ ಚಂದ್ರಪ್ರಭ, ವಿನೋದ್ ಗೊಬ್ರಗಾಲ, ಮಿಮಿಕ್ರಿ, ಗೋಪಿ, ಸಚಿನ್ ಪುರೋಹಿತ್, ಚೈತ್ರಾ, ಕೊಟ್ಟೂರು ಸೇರಿದಂತೆ ಹಲವಾರು ಹಾಸ್ಯ ಕಲಾವಿದರು ನಟಿಸಿದ್ದಾರೆ. ಚಿತ್ರಕ್ಕೆ ಆಸ್ಕರ್ ಕೃಷ್ಣ ನಿರ್ದೇಶನವಿದ್ದು, ಮಂಜು ಕವಿ ಸಾಹಿತ್ಯ ಮತ್ತು ಸಂಗೀತ ನೀಡಿದ್ದಾರೆ. ವಿನಯ್ ಗೌಡ ಛಾಯಾಗ್ರಹಣ, ಅಯುರ್ ಸಂಕಲನ, ವೆಂಕಟ್ ಸಂಭಾಷಣೆ ಬರೆದಿದ್ದಾರೆ. ಚಂದ್ರಶೇಖರ ಪಿಆರ್‌ಒ ಆಗಿದ್ದು, ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ ಹಂಡಿಗಿ ಸಹಯೋಗ ನೀಡಿದ್ದಾರೆ. ಅರುಣ ಎಲ್. ಶೆಟ್ಟಿ, ವೈಶಾಲಿ ಮುರಳೀಧರ್, ಪಲ್ಲವಿ ಅಗ್ನಿಹೋತ್ರಿ, ಬಾಬು ಎಸ್.ಎಚ್. (ತುಮಕೂರು), ರವಿ ನಾಯಕ್, ನಿಂಗರಾಜು ಬಿ., ಲೋಕೇಶ್ ಕೆ.ಎಸ್. ಹಾಗೂ ಸಿದ್ದಲಿಂಗಯ್ಯ ಚಿತ್ರವನ್ನು ನಿರ್ಮಿಸುತ್ತಿದ್ದಾರೆ.

25, 30, 35 ಮತ್ತು 40 ವರ್ಷದ ನಾಲ್ವರು ವ್ಯಕ್ತಿಗಳ ಬದುಕಿನ ಸುತ್ತ ಸಾಗುವ ಈ ಚಿತ್ರವು, ಮದ್ಯಪಾನದ ದುಷ್ಪರಿಣಾಮಗಳು ಹಾಗೂ ಸಾಮಾಜಿಕ ಸಮಸ್ಯೆಗಳನ್ನು ಹಾಸ್ಯದ ಮೂಲಕ ಮನಮುಟ್ಟುವ ರೀತಿಯಲ್ಲಿ ಚಿತ್ರಿಸುತ್ತದೆ ಎಂದು ನಿರ್ದೇಶಕ ಆಸ್ಕರ್ ಕೃಷ್ಣ ತಿಳಿಸಿದ್ದಾರೆ.ಚಿತ್ರವನ್ನು ದಸರಾ ಅಥವಾ ದೀಪಾವಳಿ ವೇಳೆಗೆ ಬಿಡುಗಡೆ ಮಾಡುವ ಗುರಿಯನ್ನು ಚಿತ್ರತಂಡ ಹೊಂದಿದೆ.

# ಅಬ್ದುಲ್‌ಸಾಬ್ ಅಣ್ಣಿಗೇರಿ ನೇಮಕ

**ವಿಜಯಸಾಕ್ಷಿ ಸುದ್ದಿ, ಗದಗ**



ಕೇಂದ್ರ, ಕೈಗಾರಿಕಾ ಹಾಗೂ ಉಕ್ಕು ಖಾತೆ ಸಚಿವರು, ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರ ಅಭಿಮಾನಿ ಬಳಗದ ಗದಗ ನಗರ ಘಟಕದ ಅಧ್ಯಕ್ಷರಾಗಿ ಯುವ ಮುಖಂಡ ಅಬ್ದುಲ್‌ಸಾಬ್ ಎಂ. ಅಣ್ಣಿಗೇರಿ ಅವರನ್ನು ನೇಮಕ ಮಾಡಲಾಗಿದೆ.

ಈ ಕುರಿತು ಗದಗ ಜಿಲ್ಲಾ ಕುಮಾರಸ್ವಾಮಿ ಅಭಿಮಾನಿ ಬಳಗದ ಜಿಲ್ಲಾಧ್ಯಕ್ಷ ಬಸವರಾಜ ಜಕ್ಕಪ್ಪನವರ ಆದೇಶ ಹೊರಡಿಸಿದ್ದು, ನಗರದಲ್ಲಿ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಈ ನೇಮಕ ಮಾಡಲಾಗಿದೆ.

ಅಬ್ದುಲ್‌ಸಾಬ್ ಅಣ್ಣಿಗೇರಿ ಅವರು ಪ್ರತಿ ವಾರ್ಡ್ ಹಾಗೂ ಬೂತ್ ಮಟ್ಟದಲ್ಲಿ ಸಂಘಟನೆಯನ್ನು ವಿಸ್ತರಿಸಿ, ಕಾರ್ಯಕರ್ತರನ್ನು ಸಂಘಟಿಸುವಂತೆ ಸೂಚನೆ ನೀಡಲಾಗಿದೆ ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಾವಲ ಎಂ. ಮುಳಗುಂದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಧಾರವಾಡದಲ್ಲಿ ಸಿಐಟಿಯು ವತಿಯಿಂದ ಬೃಹತ್ ಪ್ರತಿಭಟನೆ; ಸಿಎಂಗೆ ಮನವಿ

# ₹7 ಸಾವಿರ ವೇತನ ಹೆಚ್ಚಳಕ್ಕೆ ಬಿಸಿಯೂಟ ನೌಕರರ ಆಗ್ರಹ




**ವಿಜಯಸಾಕ್ಷಿ ಸುದ್ದಿ, ಧಾರವಾಡ**

ರಾಜ್ಯ ಸರ್ಕಾರ ಚುನಾವಣಾ ವೇಳೆ ನೀಡಿದ್ದ ಭರವಸೆಯಂತೆ ಬಿಸಿಯೂಟ (ಅಕ್ಷರದಾಸೋಹ) ನೌಕರರ ವೇತನವನ್ನು ₹7 ಸಾವಿರ ಹೆಚ್ಚಳ ಮಾಡಬೇಕು, ಆರೋಗ್ಯ ವಿಮೆ, ಪಿಂಚಣಿ ಸೇರಿದಂತೆ ಸಾಮಾಜಿಕ ಭದ್ರತೆ ಒದಗಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಅಕ್ಷರದಾಸೋಹ ನೌಕರರ ಸಂಘ (ಸಿಐಟಿಯು) ನೇತೃತ್ವದಲ್ಲಿ ಧಾರವಾಡದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದ ನೌಕರರು, ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಸಿಐಟಿಯು ರಾಜ್ಯ ಕಾರ್ಯದರ್ಶಿ ಮಹೇಶ ಪತ್ತಾರ, ಕಳೆದ 12 ವರ್ಷಗಳಿಂದ ಕೇಂದ್ರ, ಸರ್ಕಾರ ಮಧ್ಯಾಹ್ನದ ಬಿಸಿಯೂಟ ಯೋಜನೆಗೆ ಅನುದಾನ ಹಾಗೂ ನೌಕರರ ಗೌರವಧನ ಹೆಚ್ಚಳ ಮಾಡಿಲ್ಲ.

ಅತಿ ಕಡಿಮೆ ವೇತನದಲ್ಲಿ ಬಡ ಮಹಿಳೆಯರಿಂದ ಹೆಚ್ಚಿನ ಕೆಲಸ ಮಾಡಿಸಿಕೊಳ್ಳುತ್ತಿರುವುದು ಅಮಾನವೀಯವಾಗಿದೆ. ಸರ್ಕಾರಗಳು ಬೇಡಿಕೆಗಳನ್ನು ನಿರ್ಲಕ್ಷಿಸಿದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

> **ಚುನಾವಣಾ ಭರವಸೆಯಂತೆ ಬಿಸಿಯೂಟ ನೌಕರರಿಗೆ ₹7 ಸಾವಿರ ವೇತನ ಹೆಚ್ಚಳ ಮಾಡಬೇಕು. ಸಾಮಾಜಿಕ ಭದ್ರತೆ ನೀಡದಿದ್ದರೆ ಹೋರಾಟ ಮತ್ತಷ್ಟು ತೀವ್ರಗೊಳ್ಳಲಿದೆ.**
> **- ಮಹೇಶ ಪತ್ತಾರ,** ರಾಜ್ಯ ಕಾರ್ಯದರ್ಶಿ, ಸಿಐಟಿಯು

ಮನವಿಯಲ್ಲಿ, 6 ಗಂಟೆ ಕೆಲಸದ ಅವಧಿಯ ಸುತ್ತೋಲೆ ಹೊರಡಿಸುವುದು, ಆರೋಗ್ಯ ವಿಮೆ ಜಾರಿ, ಮಾಸಿಕ ₹10 ಸಾವಿರ ಪಿಂಚಣಿ, ನಿವೃತ್ತ ನೌಕರರಿಗೆ ಇಡಿಗಂಟು (ಗ್ರ್ಯಾಚ್ಯುಟಿ) ಜಾರಿ, ಶಾಲೆಗಳಲ್ಲಿ ಗ್ರೂಪ್‌ಡಿ ಸಿಬ್ಬಂದಿಯಾಗಿ ನೇಮಕ, ಬೇಸಿಗೆ ಹಾಗೂ ದಸರಾ ರಜೆ ಅವಧಿಯ ವೇತನ ಪಾವತಿ, ಬಿಸಿಯೂಟ ಯೋಜನೆಯನ್ನು ಖಾಸಗಿ ಸಂಸ್ಥೆಗಳಿಗೆ ನೀಡದಿರುವುದು, ಪ್ರತಿ ಶಾಲೆಗೆ ಕನಿಷ್ಠ ಇಬ್ಬರು ಅಡುಗೆ ಸಿಬ್ಬಂದಿ ನೇಮಕ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಲಾಯಿತು.

ಪ್ರತಿಭಟನೆಯ ನೇತೃತ್ವವನ್ನು ಸಿಐಟಿಯು ಜಿಲ್ಲಾಧ್ಯಕ್ಷ ಬಿ.ಐ. ಈಳಿಗೇರ, ಅಕ್ಷರದಾಸೋಹ ನೌಕರರ ಸಂಘದ ಜಿಲ್ಲಾಧ್ಯಕ್ಷೆ ಚನ್ನಮ್ಮ ಡೊಳ್ಳಿನ, ಪ್ರಧಾನ ಕಾರ್ಯದರ್ಶಿ ಸುನಂದಾ ಚಿಗರಿ, ಖಜಾಂಚಿ ಫಕ್ಕೀರವ್ವ ತೆಂಬದಮನಿ, ಶೋಭಾ ಮೂಲಿಮನಿ, ಯಮನವ್ವ ಮಾದರ, ಕಲಾವತಿ ಹಾಗೂ ಶೋಭಾ ವಹಿಸಿದ್ದರು.




**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪ್ರಕೃತಿಯ ಸೃಷ್ಟಿಯ ಮುಂದೆ ಮನುಷ್ಯನ ಕಲ್ಪನೆಯೂ ಕೆಲವೊಮ್ಮೆ ಮಂಕಾಗುತ್ತದೆ. ಅಂತಹ ಅಪರೂಪದ ಪ್ರಕೃತಿ ವೈಚಿತ್ರ್ಯವೊಂದು ನರೇಗಲ್ಲ-ಗದಗ ರಸ್ತೆಯ ಪೆಟ್ರೋಲ್ ಬಂಕ್ ಸಮೀಪದ ಪ್ರಶಾಂತ ಮೇಸ್ತ್ರಿ ಅವರ ಕಾರ್ ಗ್ಯಾರೇಜ್ ಎದುರು ಸಾರ್ವಜನಿಕರ ಗಮನ ಸೆಳೆಯುತ್ತಿದೆ.

ಗಿಡ ಮತ್ತು ಜಾಲಿಗಿಡಗಳ ಸಹಜ ಬೆಳವಣಿಗೆಯಿಂದ ರೂಪುಗೊಂಡಿರುವ ಈ ಆಕಾರ ನೋಡಿದವರಿಗೆ ಒಂದೇ ರೀತಿಯಾಗಿ ಕಾಣುವುದಿಲ್ಲ. ಕೆಲವರಿಗೆ ಅದು ಬಾಯಿ ತೆರೆದು ಬೇಟೆಗೆ ಹೊಂಚು ಹಾಕಿರುವ ಮೊಸಳೆಯಂತೆ ಭಾಸವಾದರೆ, ಮತ್ತೂ ಕೆಲವರಿಗೆ ಸೊಂಡಿಲೆತ್ತಿ ಘೀಳಿಡುತ್ತಿರುವ ಆನೆಯಂತೆ ಕಾಣುತ್ತಿದೆ. ಅದರ ತಲೆ, ಬಾಯಿ ಮತ್ತು ಕೋರೆ ಹಲ್ಲುಗಳಂತಿರುವ ಆಕಾರ ಪ್ರಕೃತಿಯ ಅದ್ಭುತ ಕಲಾಕೃತಿಯಂತೆ ಗೋಚರಿಸುತ್ತಿದೆ. ವಿಶೇಷವೆಂದರೆ, ಈ ರಚನೆಯನ್ನು ಯಾರೂ ಕೃತಕವಾಗಿ ಸೃಷ್ಟಿಸಿಲ್ಲ. ಯಾವುದೇ ಕೊಂಬೆಗಳನ್ನು ಕತ್ತರಿಸಿ ಅಥವಾ ರೂಪಿಸಿ ಮಾಡದೇ, ಗಿಡಗಳ ಸಹಜ ಬೆಳವಣಿಗೆಯಿಂದಲೇ ಈ ವಿಶಿಷ್ಟ ಆಕಾರ ಮೂಡಿದೆ. ಇದೇ ಕಾರಣಕ್ಕೆ ಈ ಮಾರ್ಗದಲ್ಲಿ ಸಂಚರಿಸುವ ಅನೇಕರು ವಾಹನಗಳನ್ನು ನಿಲ್ಲಿಸಿ ಕೆಲ ಹೊತ್ತು ಈ ಪ್ರಕೃತಿ ವೈಚಿತ್ರ್ಯವನ್ನು ಕಣ್ತುಂಬಿಕೊಳ್ಳುತ್ತಿದ್ದಾರೆ.

ಸ್ಥಳೀಯ ನಿವಾಸಿ ಈರಪ್ಪ ಮಣ್ಣೊಡ್ಡರ ಮಾತನಾಡಿ, ನಾವು ಇಲ್ಲಿಯೇ ಕೆಲಸ ಮಾಡುತ್ತಿದ್ದರೂ ಈ ರಚನೆ ನಮ್ಮ ಗಮನಕ್ಕೆ ಬಂದಿರಲಿಲ್ಲ. ದಾರಿಹೋಕರು ಪದೇಪದೇ ವಾಹನ ನಿಲ್ಲಿಸಿ ನೋಡುತ್ತಿರುವುದನ್ನು ಕಂಡು ಕುತೂಹಲದಿಂದ ಗಮನಿಸಿದಾಗ ಈ ಅಪರೂಪದ ಆಕಾರ ಕಾಣಿಸಿತು. ಇದು ಪ್ರಕೃತಿಯೇ ಮೂಡಿಸಿರುವ ಅದ್ಭುತ ಶಿಲ್ಪ, ಎಂದು ಆಶ್ಚರ್ಯ ವ್ಯಕ್ತಪಡಿಸಿದರು.

ಸೃಷ್ಟಿಯ ರಹಸ್ಯಗಳನ್ನು ಅರಿಯಲು ದೊಡ್ಡ ಕಣ್ಣಲ್ಲ, ಗಮನಿಸುವ ಕಣ್ಣು ಸಾಕು ಎನ್ನುವುದನ್ನು ಈ ಪ್ರಕೃತಿ ಕಲಾಕೃತಿಯೇ ಸಾಬೀತುಪಡಿಸುತ್ತಿದೆ.

## ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಕಿಟ್ ವಿತರಣೆ

# ಪರೋಪಕಾರವೇ ಜೀವನದ ಪರಮಾರ್ಥ




**ವಿಜಯಸಾಕ್ಷಿ ಸುದ್ದಿ, ಗದಗ**

ಪರೋಪಕಾರಾರ್ಥಮಿದಂ ಶರೀರಂ ಎಂಬ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಂಡು, ಗಳಿಸಿದ ಆದಾಯದ ಒಂದು ಭಾಗವನ್ನು ಸಮಾಜದ ಒಳಿತಿಗೆ ಮೀಸಲಿಡಬೇಕು ಎಂದು ಕೆ.ಎಚ್. ಪಾಟೀಲ ಇನ್‌ಸ್ಟಿಟ್ಯೂಟ್ ಆಫ್ ನೇಚರೋಪತಿ ಮತ್ತು ಯೋಗಿಕ್ ಸೈನ್ಸಸ್‌ನ ಮುಖ್ಯ ವೈದ್ಯಾಧಿಕಾರಿ ಡಾ. ಸತೀಶ ಹೊಂಬಾಳಿ ಹೇಳಿದರು.

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯಲ್ಲಿ ದ್ವಾರಕಾಮಯಿ ಫೌಂಡೇಶನ್ ಹಾಗೂ ಅಮೃತಾ ಟೂಲ್ಸ್ ಕ್ರಾಫ್ಟ್ ಪ್ರೈವೇಟ್ ಲಿಮಿಟೆಡ್ ಸಹಯೋಗದಲ್ಲಿ ಆರ್ಥಿಕವಾಗಿ ಹಿಂದುಳಿದ 400 ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್, ನೋಟ್ ಪುಸ್ತಕ, ಪೆನ್ ಹಾಗೂ ಪೆನ್ಸಿಲ್ ಕಿಟ್ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ ವಿನಾಯಕ ಶಾಲೆ ಉತ್ತಮ ವ್ಯಕ್ತಿತ್ವವುಳ್ಳ ನಾಗರಿಕರನ್ನು ರೂಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದ್ದು, ವಿದ್ಯಾರ್ಥಿಗಳು ಆಸೆಗಳ ಹಿಂದೆ ಓಡುವ ಬದಲು ಅಗತ್ಯಕ್ಕೆ ತಕ್ಕಂತೆ ಬದುಕಿ, ಸಮಾಜಸೇವೆಯ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ದ್ವಾರಕಾಮಯಿ ಫೌಂಡೇಶನ್ ಸಂಸ್ಥಾಪಕ ಹಾಗೂ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯ ನಿರ್ದೇಶಕ ವಿನಾಯಕ್ ಆರ್. ಮಾತನಾಡಿ, ಮಕ್ಕಳಲ್ಲಿ ಪ್ರೀತಿ, ದಯೆ, ಮಾನವೀಯತೆ ಮತ್ತು ಪರಸ್ಪರ ಗೌರವದಂತಹ ಮೌಲ್ಯಗಳನ್ನು ಬೆಳೆಸಿಕೊಳ್ಳುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಪ್ರತಿಭಾವಂತ ಹಾಗೂ ಆರ್ಥಿಕವಾಗಿ ಹಿಂದುಳಿದ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಶಾಲಾ ಕಿಟ್‌ಗಳನ್ನು ವಿತರಿಸಲಾಯಿತು.

ಶಿಕ್ಷಕಿ ಜಯಶ್ರೀ ನಾಗರದ ಅತಿಥಿಗಳನ್ನು ಪರಿಚಯಿಸಿದರು. ಕುಬ್ರಾ, ಬಾವಿಕಟ್ಟಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಉಪನಿರ್ದೇಶಕಿ ಗಾಯತ್ರಿ ವಿ., ಇಎಲ್‌ಸಿ ಮುಖ್ಯಸ್ಥೆ ಮಲ್ಲಿಕಾ ಆರ್., ಪ್ರಾಚಾರ್ಯ ವಿ.ಎಂ. ಅರ್ಡ್ಗೂ, ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾದ್ಯಂತ ಉಗ್ರ ಹೋರಾಟ: ಕರವೇ ಎಚ್ಚರಿಕೆ

# ಅಕ್ರಮ ಮಣ್ಣು ಗಣಿಗಾರಿಕೆಗೆ ಕಡಿವಾಣ ಹಾಕಿ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಹಲವು ವರ್ಷಗಳಿಂದ ಎಗ್ಗಿಲ್ಲದೆ ನಡೆಯುತ್ತಿರುವ ಅಕ್ರಮ ಮಣ್ಣು ಗಣಿಗಾರಿಕೆಯನ್ನು ತಕ್ಷಣವೇ ನಿಲ್ಲಿಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಜಿಲ್ಲಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರಕ್ಷಣಾ ವೇದಿಕೆ (ಎಚ್. ಶಿವರಾಮೇಗೌಡ್ರ ಬಣ) ಜಿಲ್ಲಾಧ್ಯಕ್ಷ ಎಂ.ಪಿ. ಪರ್ವತಗೌಡ್ರ ಎಚ್ಚರಿಕೆ ನೀಡಿದರು.

ಈ ಕುರಿತು ಕರವೇ ಕಾರ್ಯಕರ್ತರೊಂದಿಗೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರಿಗೆ ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಅವರು, ರಾಜ್ಯದ ಇತರ ಜಿಲ್ಲೆಗಳಿಗಿಂತ ಗದಗ ಜಿಲ್ಲೆಯಲ್ಲಿ ಅಕ್ರಮ ಮಣ್ಣು ಗಣಿಗಾರಿಕೆ ವ್ಯಾಪಕವಾಗಿ ನಡೆಯುತ್ತಿದೆ.

ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳು ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸಿರುವುದರಿಂದ ಅಕ್ರಮ ದಂಧೆ ನಿರಾತಂಕವಾಗಿ ಸಾಗುತ್ತಿದೆ ಎಂದು ಆರೋಪಿಸಿದರು.

ಕಾನೂನು ಹಾಗೂ ನಿಯಮಾವಳಿಗಳನ್ನು ಸಂಪೂರ್ಣ ಉಲ್ಲಂಘಿಸಿ ಹಗಲಿರುಳು ಅಕ್ರಮ ಮಣ್ಣು ಸಾಗಾಟ ನಡೆಯುತ್ತಿದ್ದು, ಇದರಿಂದ ಸರ್ಕಾರದ ಆದಾಯಕ್ಕೂ ನಷ್ಟವಾಗುತ್ತಿದೆ.

ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ದಾಳಿ ನಡೆಸಿ ಅಕ್ರಮ ದಂಧೆಗೆ ಬ್ರೇಕ್ ಹಾಕಬೇಕು ಎಂದು ಆಗ್ರಹಿಸಿದರು.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಸಂಘಟನಾ ಕಾರ್ಯದರ್ಶಿ ಬಸಯ್ಯ ಗುಡ್ಡಿಮಠ, ಶರಣಪ್ಪ ಹೊನ್ನಪ್ಪನವರ, ಕರವೇ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಪಾರ್ವತಿ ಪಾಟೀಲ, ಲಕ್ಷ್ಮಿ ಶಿವಸಿಂಪಿಗೆ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಪರಶುರಾಮ ಬನ್ನುರ, ರೈತ ಸಂಘದ ಬಸವರಾಜ ಬಜಂತ್ರಿ, ಮಂಜುನಾಥ ಹೊನ್ನಪ್ಪನವರ, ಮಂಜುನಾಥ ಭಜಂತ್ರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> **ಅಕ್ರಮ ಮಣ್ಣು ಗಣಿಗಾರಿಕೆಗೆ ಜಿಲ್ಲಾಡಳಿತ ತಕ್ಷಣ ಕಡಿವಾಣ ಹಾಕಬೇಕು. ಇಲ್ಲವಾದರೆ ಕರ್ನಾಟಕ ರಕ್ಷಣಾ ವೇದಿಕೆ ನೇತೃತ್ವದಲ್ಲಿ ತೀವ್ರ ಹೋರಾಟ ಆರಂಭಿಸಲಾಗುವುದು.**
>
> **- ಎಂ.ಪಿ. ಪರ್ವತಗೌಡ್ರ,**
> ಜಿಲ್ಲಾಧ್ಯಕ್ಷ, ಕರವೇ
> (ಎಚ್. ಶಿವರಾಮೇಗೌಡ್ರ ಬಣ)

# ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಿ: ಮಿಥುನ್ ಜಿ. ಪಾಟೀಲ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹಾಲಕೆರೆ ಗ್ರಾಮದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ನಿರ್ಮಿಸಲಾಗುತ್ತಿರುವ ಜಲಸಂಗ್ರಹಾಗಾರದ ಕಾಮಗಾರಿಯನ್ನು ಗುಣಮಟ್ಟದಿಂದ ಪೂರ್ಣಗೊಳಿಸಿ ಗ್ರಾಮಕ್ಕೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ರೋಣ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಮಿಥುನ್ ಜಿ. ಪಾಟೀಲ ಹೇಳಿದರು.

ಗ್ರಾಮದಲ್ಲಿ ನಿರ್ಮಾಣಗೊಳ್ಳಲಿರುವ ಜಲಸಂಗ್ರಹಾಗಾರಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಗ್ರಾಮದಲ್ಲಿ ನೀರು ಸಂಗ್ರಹಿಸುವ ವ್ಯವಸ್ಥೆ ಇಲ್ಲದಿರುವುದನ್ನು ಮನಗಂಡು ಶಾಸಕ ಜಿ.ಎಸ್. ಪಾಟೀಲ ಅವರು ತಮ್ಮ ಶಾಸಕರ ಅನುದಾನದಿಂದ ₹20 ಲಕ್ಷ ಮಂಜೂರು ಮಾಡಿದ್ದು, ಗ್ರಾಮ ಪಂಚಾಯಿತಿಯಿಂದ ₹20 ಲಕ್ಷ ನೀಡಲಾಗುತ್ತಿದೆ.

ಒಟ್ಟು ₹40 ಲಕ್ಷ ವೆಚ್ಚದಲ್ಲಿ ಜಲಸಂಗ್ರಹಾಗಾರ ನಿರ್ಮಾಣವಾಗಲಿದ್ದು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಗುಣಮಟ್ಟದ ಕಾಮಗಾರಿ ನಡೆಸಬೇಕು ಎಂದು ಸೂಚಿಸಿದರು.

ಸಾನ್ನಿಧ್ಯ ವಹಿಸಿದ್ದ ಶ್ರೀ ಮುಪ್ಪಿನ ಬಸಲಿಂಗ ಸ್ವಾಮೀಜಿ ಮಾತನಾಡಿ, ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ.

ಹಾಲಕೆರೆ ಗ್ರಾಮಕ್ಕೆ ಜಲಸಂಗ್ರಹಾಗಾರದ ಅವಶ್ಯಕತೆ ಬಹಳಷ್ಟಿದ್ದು, ಶಾಸಕ ಜಿ.ಎಸ್. ಪಾಟೀಲ ಅವರ ಕೊಡುಗೆ ಶ್ಲಾಘನೀಯವಾಗಿದೆ ಎಂದರು.

ಗ್ರಾಮದಲ್ಲಿ ನೆಡುವ ಸಸಿಗಳನ್ನು ಮರಗಳಾಗುವವರೆಗೆ ಸಂರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಹಾಲಕೆರೆ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಅಂದನಗೌಡ ಪಾಟೀಲ, ರೋಣ ಎಇ ರಶ್ಮಿ, ಗಜೇಂದ್ರಗಡ ತಾಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಶರಣಪ್ಪ ಬೆಟಗೇರಿ ಮಾತನಾಡಿದರು.

ಈ ಸಂದರ್ಭದಲ್ಲಿ ಗಿರೀಶಗೌಡ ಮುಲ್ಕಿಪಾಟೀಲ, ಸಿದ್ದನಗೌಡರ ಇನಾಮತಿ, ಸೊಪ್ಪಯ್ಯ ಸ್ವಾಮಿ ಸೊಪ್ಪಿಹಿರೇಮಠ, ಹೊನ್ನಪ್ಪಗೌಡ ಪಾಟೀಲ, ಪಿಡಿಒ ಶರಣಪ್ಪ ನರೇಗಲ್ಲ, ಶಿವಕುಮಾರ ನಂದಿ, ಅಂದಾನಗೌಡ ಪಾಟೀಲ, ವೀರಣ್ಣ ಹಳ್ಳಿ, ಅಶೋಕ ಮಾಳಗೌಡರ, ಮಹೇಶ್ ಕುರಿ, ಆನಂದ ಹಳ್ಳಿ, ಪರುಶುರಾಮ ತೆಲೆಖಾನ, ರಾಮಪ್ಪ ಪೂಜಾರ, ಶರಣಪ್ಪ ಪೂಜಾರ, ನವೀನ್ ಮಾದಿನೂರ, ಪ್ರವೀಣ ಭೈರಗೊಂಡ, ಬಾಳಪ್ಪ ಕುರಿ, ಮಾಂತೇಶ್ ಪ್ರಭಣ್ಣವರ, ಸಿದ್ದಪ್ಪ ಗೆದಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಆಡಂಬರ ಬಿಟ್ಟು ಸಮಾಜಮುಖಿ ಕಾರ್ಯಗಳಿಗೆ ಯುವಕರು ಮುಂದಾಗಲಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇಂದಿನ ಯುವಕರು ತಮ್ಮ ಜನ್ಮದಿನವನ್ನು ಕೇವಲ ಆಡಂಬರಕ್ಕೆ ಸೀಮಿತಗೊಳಿಸದೆ, ಸಮಾಜಮುಖಿ ಕಾರ್ಯಗಳ ಮೂಲಕ ಆಚರಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ರೋಣದ ಜಗದ್ಗುರು ಬೂದೀಶ್ವರ ಹಿರೇಮಠದ ಶ್ರೀ ವಿಶ್ವನಾಥ ಮಹಾಸ್ವಾಮಿಗಳು ಹೇಳಿದರು.

ಸಮೀಪದ ಅಬ್ಬಿಗೇರಿ ಗ್ರಾಮದ ಕನ್ನಡ ಗಂಡು ಮಕ್ಕಳ ಪ್ರಾಥಮಿಕ ಶಾಲೆಯಲ್ಲಿ ಬಸವರಾಜ ತಳವಾರ ಯುವ ಬ್ರಿಗೇಡ್ ಆಶ್ರಯದಲ್ಲಿ ಆಯೋಜಿಸಿದ್ದ ಬಸವರಾಜ ತಳವಾರ ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಇಂದಿನ ಯುವಜನತೆ ಕೇಕ್ ಕತ್ತರಿಸುವುದು, ಪಟಾಕಿ ಸಿಡಿಸುವುದನ್ನೇ ಹುಟ್ಟುಹಬ್ಬದ ಸಂಭ್ರಮವೆಂದು ಭಾವಿಸುತ್ತಿದ್ದಾರೆ. ಆದರೆ ಬಸವರಾಜ ತಳವಾರ ಅವರು ಪ್ರತಿ ವರ್ಷ ಬಡ ಮಕ್ಕಳಿಗೆ ನೆರವು, ಪರಿಸರ ಸಂರಕ್ಷಣೆ ಸೇರಿದಂತೆ ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಜನ್ಮದಿನ ಆಚರಿಸುತ್ತಿರುವುದು ಮಾದರಿಯಾಗಿದೆ ಎಂದು ಶ್ಲಾಘಿಸಿದರು. ವಿ.ಎಸ್.ಎಸ್. ಬ್ಯಾಂಕ್ ಅಬ್ಬಿಗೇರಿಯ ಮಾಜಿ ಅಧ್ಯಕ್ಷ ಗುರುನಾಥ ಅವರಡ್ಡಿ ಹಾಗೂ ರೋಣ ಗ್ಯಾರಂಟಿ ಸಮಿತಿ ಸದಸ್ಯ, ನರೇಗಲ್ಲ ಬ್ಲಾಕ್ ಎಸ್‌ಸಿ ಘಟಕದ ಅಧ್ಯಕ್ಷ ಎಚ್.ಟಿ. ದ್ವಾಸಲ ಮಾತನಾಡಿ, ತಳವಾರ ಅವರ ಸಮಾಜಸೇವೆಯ ಚಿಂತನೆ ಹಾಗೂ ಎಲ್‌ಕೆಜಿ, ಯುಕೆಜಿ ಮತ್ತು ಪ್ರಥಮ ತರಗತಿ ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ ವಿತರಿಸಿರುವ ಕಾರ್ಯ ಯುವಕರಿಗೆ ಸ್ಫೂರ್ತಿಯಾಗಿದೆ ಎಂದರು. ಕಾರ್ಯಕ್ರಮದಲ್ಲಿ ಪುಟಾಣಿ ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ ವಿತರಿಸಲಾಯಿತು. ಪರಿಸರ ಸಂರಕ್ಷಣೆಯ ಅಂಗವಾಗಿ ಗ್ರಾಮದ ಶ್ರೀಕಂಠಿ ಬಸವೇಶ್ವರ ದೇವಸ್ಥಾನಕ್ಕೆ ಬಿಲ್ವಪತ್ರೆ ಸಸಿಗಳನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ಬಸವರಾಜ ಪಲ್ಲೇದ, ದೇವಣ್ಣ ಬಿಲ್ಲ, ಆರ್.ಬಿ. ಬಸವರಡ್ಡೇರ, ಶಿವಣ್ಣ ಗುಗ್ಗರಿ, ಮುತ್ತಣ್ಣ ಲಿಂಗರಡ್ಡಿ, ಅಂದಪ್ಪ ವೀರಾಪುರ, ಸುರೇಶ ಶಿರೋಳ, ಎಂ.ಕೆ. ಅಂಗಡಿ, ರಂಗಣ್ಣ ತಳವಾರ, ರಾಮನಗೌಡ ಹಲಕುರ್ಕಿ, ಅಯ್ಯಪ್ಪ ಮಳಗಿ, ಜಗ್ಗಣ್ಣ ಅವರಡ್ಡಿ, ಮಲ್ಲಯ್ಯ ಶಿವಪೂಜಿ, ಬಾಬು ಬನ್ನಿಕೊಪ್ಪ, ಮಂಜು ಚಿತ್ತರಗಿ, ಮಲ್ಲಿಕಾರ್ಜುನ ಕಲ್ಲೆಶ್ಯಾಣಿ, ಗಣೇಶ ತಳವಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಎಂ.ಎಸ್. ಗುಡಿಹಿಂದಲ ಕಾರ್ಯಕ್ರಮ ನಿರೂಪಿಸಿದರು. ಆರ್.ವಿ. ಬೆಲ್ಲದ ವಂದಿಸಿದರು.

# ಒಳಮೀಸಲಾತಿ ಜಾರಿಗೊಳಿಸಿ ಅಂಗನವಾಡಿ ನೇಮಕಾತಿ ನಡೆಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ನೇಮಕಾತಿಯಲ್ಲಿ ಸರ್ಕಾರದ ಆದೇಶದಂತೆ ಒಳಮೀಸಲಾತಿ ಕಡ್ಡಾಯವಾಗಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಭೀಮ ಶಕ್ತಿ ಸಂಘಟನೆ ವತಿಯಿಂದ ಗದಗ ಉಪವಿಭಾಗಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಭೀಮ ಶಕ್ತಿ ಸಂಘಟನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಶಂಕರ ಮುಗುಳಿ, ರಾಜ್ಯ ಸರ್ಕಾರವು 2026ರ ಮೇ 8ರಂದು ಹೊರಡಿಸಿರುವ ಆದೇಶದ ಪ್ರಕಾರ ಪರಿಶಿಷ್ಟ ಜಾತಿಗೆ ಮೂರು ಅಥವಾ ಅದಕ್ಕಿಂತ ಹೆಚ್ಚು ಹುದ್ದೆಗಳು ಇದ್ದರೆ ಒಳಮೀಸಲಾತಿ ಅನ್ವಯ ನೇಮಕಾತಿ ನಡೆಸುವುದು ಕಡ್ಡಾಯವಾಗಿದೆ.

ಆದರೆ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ಶಿಶು ಅಭಿವೃದ್ಧಿ ಯೋಜನೆಯಡಿ ಜೂನ್ 22ರಂದು ಪ್ರಕಟಿಸಿರುವ ನೇಮಕಾತಿ ಅಧಿಸೂಚನೆಯಲ್ಲಿ ಈ ನಿಯಮ ಪಾಲನೆಯಾಗಿಲ್ಲ ಎಂದು ಆರೋಪಿಸಿದರು.

ಪರಿಶಿಷ್ಟ ಜಾತಿಗೆ ಮೂರುಕ್ಕಿಂತ ಹೆಚ್ಚು ಹುದ್ದೆಗಳಿದ್ದರೂ ಒಳಮೀಸಲಾತಿ ಅನ್ವಯಿಸದೇ ನೇಮಕಾತಿ ಪ್ರಕ್ರಿಯೆ ಮುಂದುವರಿಸಿರುವುದು ಸರ್ಕಾರದ ಆದೇಶ ಹಾಗೂ ಸಾಮಾಜಿಕ ನ್ಯಾಯದ ತತ್ವಕ್ಕೆ ವಿರುದ್ಧವಾಗಿದೆ. ಈಗಾಗಲೇ ಹೊರಡಿಸಿರುವ ಅಧಿಸೂಚನೆಯನ್ನು ರದ್ದುಪಡಿಸಿ, ಒಳಮೀಸಲಾತಿ ಅನ್ವಯ ಹೊಸ ಅಧಿಸೂಚನೆ ಹೊರಡಿಸಬೇಕು ಎಂದು ಒತ್ತಾಯಿಸಿದರು.

ಜುಲೈ 30 ಅರ್ಜಿ ಸಲ್ಲಿಕೆಗೆ ಕೊನೆಯ ದಿನವಾಗಿದ್ದು, ಅದಕ್ಕೂ ಮುನ್ನ ಸರ್ಕಾರದ ಆದೇಶದಂತೆ ನೇಮಕಾತಿ ಪ್ರಕ್ರಿಯೆ ತಿದ್ದುಪಡಿ ಮಾಡಬೇಕು. ಇಲ್ಲವಾದರೆ ಕಾನೂನು ಹೋರಾಟದ ಜೊತೆಗೆ ಸಂಬಂಧಿಸಿದ ಕಚೇರಿ ಎದುರು ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಸಂಘಟನೆ ಎಚ್ಚರಿಕೆ ನೀಡಿದೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ರಾಜ್ಯ ಕಾನೂನು ಸಲಹೆಗಾರ ಮೈಲಾರಪ್ಪ ಡಿ.ಎಚ್., ಅಣ್ಣಪ್ಪ ಗುತ್ತೇಮ್ಮನವರ, ಅನಿಲ ಸಣ್ಣತಂಗಿಯವರ, ಪ್ರವೀಣ ಅದರಗುಂಚಿ, ಸ್ಯಾಮಸುಂದರ, ಮನು ತುರಾಡಿ, ಸೋಮಣ್ಣ, ಶಿವು ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಹೋರಾಟಗಾರರು ಉಪಸ್ಥಿತರಿದ್ದರು.

# ಸಚಿವ ಖರ್ಗೆಗೆ ಕ್ಷೇತ್ರ ಕಳೆದುಕೊಳ್ಳುವ ಭೀತಿ

**ವಿಜಯಸಾಕ್ಷಿ ಸುದ್ದಿ, ಗಂಗಾವತಿ**

ಗೃಹ ಸಚಿವ ಪ್ರಿಯಾಂಕ ಖರ್ಗೇ ಯವರು ಸ್ಥಾನಕ್ಕೆ ತಕ್ಕಂತೆ ದಕ್ಷತೆಯಿಂದ ಇರಬೇಕೇ ವಿನಹ ಸಣ್ಣತನ ಮಾಡಿ ಕ್ಷೇತ್ರ ಕಳೆದುಕೊಳ್ಳುವ ಭೀತಿಯಲ್ಲಿ ಇದ್ದಾರೆ ಎಂದು ಶಾಸಕ ಗಾಲಿ ಜನಾರ್ಧನರೆಡ್ಡಿ ಹೇಳಿದರು.

ತಾಲೂಕಿನ ಆನೆಗೊಂದಿಯಲ್ಲಿ ವಿವಿಧ ಕಾಮಗಾರಿ ಚಾಲನೆ ನಿಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ ಪದೇ ಪದೇ ಆರ್.ಎಸ್.ಎಸ್ ಲೆಕ್ಕ ಪತ್ರ, ಕೊಡಲಿ ಎನ್ನುತ್ತಾ ಮಾನಸಿಕ ಖಿನ್ನತೆಗೆ ಒಳಗಾಗಿದ್ದು ಕಂಡು ಬರುತ್ತೆ ಇವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೋಡಿಸಬೇಕು.

ಬೇರೆ ದೇಶಗಳಿಂದ ಬಂದವರಿಗೆ ಅಧಿಕಾರಿಗಳಿಗೆ ಒತ್ತಡ ಹೇರಿ ದಾಖಲಾತಿ ನೀಡುತ್ತಿರುವುದು ದೇಶ ದ್ರೋಹ ಕೆಲಸವಾಗಿದೆ. ಈಗಾಗಲೇ ಚುನಾವಣೆ ಆಯೋಗಕ್ಕೆ ದೂರು ಸಲ್ಲಿಸಲಾಗಿದೆ. ದಿವಂಗತ ಮಾಜಿ ಪ್ರಧಾನಮಂತ್ರಿಗಳಾದ ಜವಾಹರ ಲಾ ನೇಹರು,ಇಂದಿರಾಗಾಅಧಿಯವರಿಗೆ ಸಂಘದ ಬಗ್ಗೆ ಮನವರಿಕೆಯಾಗಿತ್ತು. ಆರ್,ಎಸ್.ಎಸ್ ಬಗ್ಗೆ ಟೀಕಿಸಿದಕ್ಕೆ ಗೃಹ ಖಾತೆ ನೀಡಿದ್ದಾರೆ. ಬರುವ ವಿಧಾನಸಭೆ ಚುನಾವಣೆಯಲ್ಲಿ ಅವ ರ ಕ್ಷೇತ್ರ ಕೈ ತಪ್ಪಲಿದೆ ಎಂಬು ವದನ್ನು ಕಾದು ನೀಡಬೇಕು.

ಈಹಿಂದೆ ಎಐಸಿಸಿ ಅಧ್ಯಕ್ಷ ರಾಗಿದ್ದ ಮಲ್ಲಿಕಾರ್ಜುನ ಖರ್ಗೇಯವರಿಗೆ ಜನ ಕ್ಷೇತ್ರದಲ್ಲಿ ಜನರು ಏನು ಎಂಬುದನ್ನು ತೋರಿಸಿದ್ದಾರೆ. ಅಭಿವೃದ್ಧಿ ಕೆಲಸ ಮಾಡಲು ಸಮಯ ಉಪಯೋಗಿಸಿ ದೇಶಕ್ಕಾಗಿ



ಅರ್ಪಿಸಿಕೊಂಡ ಸಂಘಕ್ಕೆ ನಿಮ್ಮ ಸರ್ಟಿಫಿಕೇಟ್ ಅವಶ್ಯಕತೆ ಇಲ್ಲ. ಪ್ರಾರ್ಥನಾ ಮಂದಿರದಲ್ಲಿ ಜನರನ್ನು ಒಂದಡೆ ಸೇರಿಸಿ ಮತ ಪರಿಷರ್ಕಣೆ ಮಾಡುವದನ್ನು ಬಿಡಿ ಅಧಿಕಾರಿಗಳು ಮನೆ ಬಾಗಿಲಿಗೆ ಹೋಗುತ್ತಾರೆ. ಚುನಾವಣೆ ಆಯೋಗ ಎಲ್ಲದನ್ನು ನೋಡಿಕೊಳ್ಳುತ್ತದೆ ಎಂದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಮನೋಹರಗೌಡ ಹೇರೂರ,ಟಿಜಿ ಬಾಬು, ಅಮರ ಜ್ಯೋತಿ ನರಸಪ್ಪ,ನಗರ ಅಧ್ಯಕ್ಷ ಚಂದ್ರು ಹಿರೂರ,ಗ್ರಾಮೀಣ ಅಧ್ಯಕ್ಷ ಡಿಕೆ ಆಗೋಲಿ,ವಿರೇಶ ಬಲಕುಂದಿ ಮುಂತಾದವರು ಉಪಸ್ಥಿತರಿದ್ದರು.

# ಜು.12ರ ಪಂಚಮಸಾಲಿ ಸಮಾಜದ ಪ್ರತಿಭಾ ಪುರಸ್ಕಾರ ಸಮಾರಂಭ ಯಶಸ್ವಿಗೊಳಿಸಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವುದು ಸಮಾಜದ ಜವಾಬ್ದಾರಿಯಾಗಿದ್ದು, ಇಂತಹ ಕಾರ್ಯಕ್ರಮಗಳು ಯುವಜನರಲ್ಲಿ ಆತ್ಮವಿಶ್ವಾಸ ಹೆಚ್ಚಿಸಿ ಸಮಾಜದ ಶೈಕ್ಷಣಿಕ ಬೆಳವಣಿಗೆಗೆ ಹೊಸ ಚೈತನ್ಯ ತುಂಬುತ್ತವೆ ಎಂದು ಪಂಚಮಸಾಲಿ ಸಮಾಜದ ಯುವ ಮುಖಂಡ ರುದ್ರೇಶ ಕೊಟಗಿ ಹೇಳಿದರು.

ಜುಲೈ 12ರಂದು ನಡೆಯಲಿರುವ ಪಂಚಮಸಾಲಿ ಸಮಾಜದ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭವು ವಿದ್ಯಾರ್ಥಿಗಳ ಸಾಧನೆಗೆ ಗೌರವ ಸಲ್ಲಿಸುವುದರ ಜೊತೆಗೆ ಇತರ ವಿದ್ಯಾರ್ಥಿಗಳಿಗೂ ಪ್ರೇರಣೆಯಾಗಲಿದೆ ಎಂದರು.

ಶಿಕ್ಷಣವೇ ಸಮಾಜದ ಅಭಿವೃದ್ಧಿಯ ಅಡಿಪಾಯವಾಗಿದ್ದು, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಮೂಲಕ ಅವರಲ್ಲಿ ಇನ್ನಷ್ಟು ಸಾಧನೆ ಮಾಡುವ ಉತ್ಸಾಹ ಮೂಡುತ್ತದೆ. ಶಿಕ್ಷಣ, ಸಂಘಟನೆ ಮತ್ತು ಸಮಾಜಸೇವೆಗೆ ಆದ್ಯತೆ ನೀಡುವ ಮೂಲಕ ಪಂಚಮಸಾಲಿ ಸಮಾಜ ಮತ್ತಷ್ಟು ಸದೃಢವಾಗಿ ಬೆಳೆಯಬೇಕಿದೆ ಎಂದು ತಿಳಿಸಿದರು.

ಯುವ ಪೀಳಿಗೆಗೆ ಸೂಕ್ತ ಮಾರ್ಗದರ್ಶನ ಮತ್ತು ಪ್ರೋತ್ಸಾಹ ನೀಡುವುದು ಸಮಾಜದ ಕರ್ತವ್ಯವಾಗಿದೆ. ಪ್ರತಿಭೆಗಳನ್ನು ಗುರುತಿಸಿ ಬೆಳೆಸಿದಾಗ ಮಾತ್ರ ಭವಿಷ್ಯದ ನಾಯಕತ್ವ ರೂಪುಗೊಳ್ಳಲು ಸಾಧ್ಯ. ಸಮಾಜದ ಎಲ್ಲ ವರ್ಗಗಳ ಸಹಕಾರದಿಂದ ಶೈಕ್ಷಣಿಕ ಹಾಗೂ ಸಾಮಾಜಿಕ ಪ್ರಗತಿ ಸಾಧ್ಯವಾಗುತ್ತದೆ ಎಂದು ಹೇಳಿದರು.

ಜುಲೈ 12ರಂದು ನಡೆಯಲಿರುವ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಸಮಾಜದ ಮುಖಂಡರು, ಯುವಕರು, ಮಹಿಳೆಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ರುದ್ರೇಶ ಕೊಟಗಿ ಮನವಿ ಮಾಡಿದ್ದಾರೆ.

# ರೇಣುಕಾ ನರಗುಂದ ನಿಧನ

**ಗದಗ**



ನಗರದ ಜವಳಗಲ್ಲಿಯ ಆರ್ಷಾದ್ ರೋಡ್, ಶ್ರೀ ಯಲ್ಲಮ್ಮನ ಗುಡಿ ಸಮೀಪದ ನಿವಾಸಿ, ಸಮಗಾರ ಹರಳಯ್ಯ ಸಮಾಜದ ಹಿರಿಯರಾದ ಶ್ರೀಮತಿ ರೇಣುಕಾ ನಾಗಪ್ಪ ನರಗುಂದ (70) ಅವರು ಶುಕ್ರವಾರ ಮಧ್ಯಾಹ್ನ 3.40ಕ್ಕೆ ನಿಧನರಾದರು.

ಅವರಿಗೆ ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವಿದೆ.

ಮೃತರ ಅಂತ್ಯಕ್ರಿಯೆಯು ಜುಲೈ 11ರ ಶನಿವಾರ ಮಧ್ಯಾಹ್ನ 12 ಗಂಟೆಗೆ ಗದಗದ ಹೊಂಬಳ ರಸ್ತೆಯ ಮುಕ್ತಿಧಾಮದಲ್ಲಿ ನಡೆಯಿತು.

# ಬರ ನಿರ್ವಹಣೆಯಲ್ಲಿ ಸರ್ಕಾರ ಸಂಪೂರ್ಣ ವಿಫಲ: ಬೊಮ್ಮಾಯಿ



**ವಿಜಯಸಾಕ್ಷಿ ಸುದ್ದಿ, ಗದಗ**


ರಾಜ್ಯದಲ್ಲಿ ತಲೆದೋರಿರುವ ಭೀಕರ ಬರ ಪರಿಸ್ಥಿತಿ ನಿರ್ವಹಣೆಯಲ್ಲಿ ಕಾಂಗ್ರೆಸ್ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಗದಗದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಶೇ.50ಕ್ಕೂ ಹೆಚ್ಚು ತಾಲೂಕುಗಳು ಬರದ ಸಂಕಷ್ಟದಲ್ಲಿದ್ದರೂ ಸರ್ಕಾರ ಯಾವುದೇ ಕಾರ್ಯಯೋಜನೆ ರೂಪಿಸಿಲ್ಲ. ಗದಗ ಜಿಲ್ಲೆಯಲ್ಲಿ ಕೇವಲ ಶೇ.30ರಷ್ಟು ಮಾತ್ರ ಬಿತ್ತನೆಯಾಗಿದ್ದು,ಜಿಲ್ಲೆಯನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಿ ಎನ್‌ಡಿಆರ್‌ಎಫ್ ನಿಧಿಯಿಂದ ರೈತರಿಗೆ ಪರಿಹಾರ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು. ಕೃಷಿ ಇಲಾಖೆ ನಿಷ್ಕ್ರಿಯವಾಗಿದ್ದು, ರೈತರಿಗೆ ಪರ್ಯಾಯ ಬೆಳೆ ಕುರಿತು ಯಾವುದೇ ಮಾರ್ಗದರ್ಶನ ಸಿಕ್ಕಿಲ್ಲ. ಗದಗ ನಗರದಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸುತ್ತಿದ್ದು, ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಜಿಲ್ಲೆಗೆ ಉಸ್ತುವಾರಿ ಸಚಿವರನ್ನು ನೇಮಿಸಿ 15 ದಿನಗಳಾದರೂ ಅವರು ಜಿಲ್ಲೆಗೆ ಭೇಟಿ ನೀಡಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ ಬೊಮ್ಮಾಯಿ, ಸಂಕಷ್ಟದ ಸಮಯದಲ್ಲಿ ಜನರೊಂದಿಗೆ ನಿಲ್ಲದ ಸರ್ಕಾರ ಬೇಜವಾಬ್ದಾರಿಯಾಗಿದೆ ಎಂದು ಟೀಕಿಸಿದರು.

# ದುಷ್ಕರ್ಮಿಗಳಿಂದ ಸರಸ್ವತಿ ದೇವಿ ಮೂರ್ತಿ ಭಗ್ನ: ಆರೋಪಿಗಳ ಬಂಧನಕ್ಕೆ ಆಗ್ರಹ

**ವಿಜಯಸಾಕ್ಷಿ ಸುದ್ದಿ, ಗದಗ**



ಜಿಲ್ಲೆಯಲ್ಲಿ ಮತ್ತೆ ದೇವರ ಮೂರ್ತಿ ವಿಕೃತಿಗೊಳಿಸಿದ ಘಟನೆ ಬೆಳಕಿಗೆ ಬಂದಿದ್ದು, ದುಷ್ಕರ್ಮಿಗಳು ನಗರದ ಐತಿಹಾಸಿಕ ಶ್ರೀ ಸರಸ್ವತಿ ದೇವಿ ಮೂರ್ತಿಯ ಎದೆಭಾಗವನ್ನು ಭಗ್ನಗೊಳಿಸಿ ವಿಕೃತಿ ಮೆರೆದಿದ್ದಾರೆ.

ಗದಗ ನಗರದ ಐತಿಹಾಸಿಕ ಶ್ರೀ ತ್ರಿಕೂಟೇಶ್ವರ ದೇವಸ್ಥಾನದ ಆವರಣದಲ್ಲಿರುವ ಶ್ರೀ ಸರಸ್ವತಿ ದೇವಸ್ಥಾನದಲ್ಲಿ ಈ ಕೃತ್ಯ ನಡೆದಿದ್ದು, ಘಟನೆ ನಿನ್ನೆ ರಾತ್ರಿ ನಡೆದಿರಬಹುದೆಂದು ಶಂಕಿಸಲಾಗಿದೆ. ಶನಿವಾರ ಮಧ್ಯಾಹ್ನ ಪ್ರಕರಣ ಬೆಳಕಿಗೆ ಬಂದಿದೆ.8ನೇ ಶತಮಾನದಲ್ಲಿ ನಿರ್ಮಾಣಗೊಂಡಿರುವ ಈ ದೇವಾಲಯ ಕೇಂದ್ರ ಪುರಾತತ್ವ ಇಲಾಖೆಯ ಅಧೀನದಲ್ಲಿದೆ. ದೇವಾಲಯದ ಐತಿಹಾಸಿಕ ಮಹತ್ವದ ನಡುವೆಯೇ ಮೂರ್ತಿಗೆ ಹಾನಿ ಉಂಟುಮಾಡಿರುವುದು ಭಕ್ತರು ಹಾಗೂ ಸಾರ್ವಜನಿಕರಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.

ಐತಿಹಾಸಿಕ ದಾಖಲೆಗಳ ಪ್ರಕಾರ, 16ನೇ ಶತಮಾನದ ಯುದ್ಧದ ಸಂದರ್ಭದಲ್ಲಿಯೂ ಈ ಮೂರ್ತಿಗೆ ಹಾನಿಯಾಗಿತ್ತು. ಇದೀಗ ಮತ್ತೊಮ್ಮೆ ಮೂರ್ತಿ ವಿಕೃತಿಗೊಂಡಿರುವುದು ಆತಂಕಕ್ಕೆ ಕಾರಣವಾಗಿದೆ.

ಪ್ರಕರಣ ಗದಗ ಶಹರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ದುಷ್ಕರ್ಮಿಗಳ ಪತ್ತೆಗೆ ತನಿಖೆ ಆರಂಭಿಸಲಾಗಿದೆ.

### ಕುಟುಂಬ ನ್ಯಾಯಾಲಯದ ರಾಜಿ ಸಂಧಾನದಲ್ಲಿ 15 ದಂಪತಿಗಳ ಪುನರ್ಮಿಲನ; 55 ಪ್ರಕರಣಗಳಿಗೆ ಸುಖಾಂತ್ಯ

# ಬೇರ್ಪಟ್ಟ ಬದುಕು ಮತ್ತೆ ಬೆಸೆದ ನ್ಯಾಯಾಲಯ!



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ವರ್ಷಗಳ ಕಾಲ ದೂರವಾಗಿದ್ದ ದಂಪತಿಗಳನ್ನು ಮತ್ತೆ ಒಂದಾಗಿಸುವಲ್ಲಿ ಧಾರವಾಡ ಕುಟುಂಬ ನ್ಯಾಯಾಲಯ ಮಹತ್ವದ ಯಶಸ್ಸು ಸಾಧಿಸಿದೆ. ರಾಜಿ ಸಂಧಾನ ಪ್ರಕ್ರಿಯೆಯಲ್ಲಿ 55 ಪ್ರಕರಣಗಳು ಇತ್ಯರ್ಥಗೊಂಡಿದ್ದು, ಅವುಗಳಲ್ಲಿ 15 ದಂಪತಿಗಳು ತಮ್ಮ ಭಿನ್ನಾಭಿಪ್ರಾಯಗಳನ್ನು ಮರೆತು ಹೊಸ ಬದುಕು ಆರಂಭಿಸಲು ನಿರ್ಧರಿಸಿದ್ದಾರೆ.

ಪುನರ್ಮಿಲನಗೊಂಡ ದಂಪತಿಗಳು ಪರಸ್ಪರ ಹಾರ ಬದಲಾಯಿಸಿಕೊಂಡು ಹೊಸ ಜೀವನಕ್ಕೆ ಕಾಲಿಟ್ಟರು. ಕುಟುಂಬ ಸದಸ್ಯರು, ನ್ಯಾಯಾಧೀಶರು ಹಾಗೂ ನ್ಯಾಯಾಲಯದ ಸಿಬ್ಬಂದಿ ಈ ಭಾವನಾತ್ಮಕ ಕ್ಷಣಕ್ಕೆ ಸಾಕ್ಷಿಯಾದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್.ವಿ. ವಿಜಯ್ ಮಾತನಾಡಿ, ರಾಜಿ ಸಂಧಾನದ ಮೂಲಕ ದಂಪತಿಗಳು ಪರಸ್ಪರ ಹೊಂದಾಣಿಕೆಯಿಂದ ಜೀವನ ಮುಂದುವರಿಸಲು ಒಪ್ಪಿಕೊಂಡಿದ್ದು, ಸಂತೋಷದಿಂದ ಮನೆಗಳಿಗೆ ತೆರಳಿದ್ದಾರೆ ಎಂದು ತಿಳಿಸಿದರು.

ಕುಟುಂಬ ನ್ಯಾಯಾಲಯದ ನ್ಯಾಯಾಧೀಶ ನಾಗರಾಜಪ್ಪ ಎ.ಕೆ. ಅವರ ಮಾಹಿತಿ ಪ್ರಕಾರ, ಪುನರ್ಮಿಲನಗೊಂಡ ದಂಪತಿಗಳಲ್ಲಿ ಕೆಲವರು 5, 10 ಹಾಗೂ 16 ವರ್ಷಗಳಿಂದ ಪ್ರತ್ಯೇಕವಾಗಿ ವಾಸಿಸುತ್ತಿದ್ದರು. ಕೇವಲ ಮೂರು ತಿಂಗಳ ಸಂಸಾರದ ಬಳಿಕ ದೂರವಾಗಿದ್ದ ದಂಪತಿಯೂ ರಾಜಿ ಸಂಧಾನದ ಮೂಲಕ ಮತ್ತೆ ಒಂದಾಗಿರುವುದು ವಿಶೇಷವಾಗಿದೆ.

ದಾಂಪತ್ಯದಲ್ಲಿ ಸಂವಾದ, ಹೊಂದಾಣಿಕೆ ಮತ್ತು ಪರಸ್ಪರ ವಿಶ್ವಾಸದ ಮಹತ್ವವನ್ನು ಮನವರಿಕೆ ಮಾಡಿಕೊಟ್ಟ ಪರಿಣಾಮ ಈ ಯಶಸ್ಸು ಸಾಧ್ಯವಾಗಿದೆ.

**ಕೌಟುಂಬಿಕ ಸಮಸ್ಯೆಗಳು ಎಲ್ಲರ ಬದುಕಿನಲ್ಲೂ ಬರುತ್ತವೆ. ಆದರೆ ಪರಸ್ಪರ ಅರ್ಥೈಸಿಕೊಳ್ಳುವ ಮನೋಭಾವ ಇದ್ದರೆ ಯಾವುದೇ ಭಿನ್ನಾಭಿಪ್ರಾಯವನ್ನು ನಿವಾರಿಸಿಕೊಂಡು ಸುಖೀ ಜೀವನ ನಡೆಸಬಹುದು.**

**- ನಾಗರಾಜಪ್ಪ ಎ.ಕೆ.,**
ನ್ಯಾಯಾಧೀಶರು, ಕುಟುಂಬ ನ್ಯಾಯಾಲಯ

ವಕೀಲರು ಹಾಗೂ ನ್ಯಾಯಾಂಗದ ಸಹಕಾರದಿಂದ ರಾಜಿ ಸಂಧಾನ ಪ್ರಕ್ರಿಯೆ ಯಶಸ್ವಿಯಾಗಿ ನಡೆದಿದ್ದು, ಹಲವು ಕುಟುಂಬಗಳಲ್ಲಿ ಮತ್ತೆ ಸಂತಸ ಮೂಡಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಅಲ್ಲಪ್ಪ ಎಂ. ಬಡಿಗೇರ ಸೇರಿದಂತೆ ವಕೀಲರು ಉಪಸ್ಥಿತರಿದ್ದರು.

## ಅಘೋರ ಹೋಮಕ್ಕೆ ಪೂರ್ಣಾಹುತಿ; ಮಂಗಲ ಭವನ ನಿರ್ಮಾಣಕ್ಕೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಶ್ರೀ ದತ್ತಾತ್ರೇಯ ದೇವಸ್ಥಾನಕ್ಕೆ ಹೊಂದಿಕೊಂಡಂತೆ ನಿರ್ಮಾಣವಾಗಲಿರುವ ಶ್ರೀ ದತ್ತ ಮಂಗಲ ಭವನ ಕಾಮಗಾರಿ ಯಶಸ್ವಿಯಾಗಲೆಂದು ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಶನಿವಾರ ಅಘೋರ ಹೋಮ ಹಾಗೂ ಪೂರ್ಣಾಹುತಿ ನೆರವೇರಿಸಲಾಯಿತು.

ಹೋಮದ ಪೂರ್ಣಾಹುತಿ ಬಳಿಕ ಮಾತನಾಡಿದ ಅರ್ಚಕ ಶ್ರೀವಲ್ಲಭಭಟ್ಟ ಸದರಜೋಷಿ, ಯಾವುದೇ ದೇವಸ್ಥಾನದ ಜೀರ್ಣೋದ್ಧಾರ ಅಥವಾ ಧಾರ್ಮಿಕ ಕಟ್ಟಡ ನಿರ್ಮಾಣದಂತಹ ಕಾರ್ಯಗಳಿಗೆ ಮುನ್ನ ಅಘೋರ ಹೋಮ ನೆರವೇರಿಸುವುದು ಶಾಸ್ತ್ರಸಮ್ಮತವಾಗಿದೆ ಎಂದು ಹೇಳಿದರು. ಶ್ರೀ ದತ್ತ ಮಂಗಲ ಭವನ ಸಮಿತಿಯ ಗೌರವಾಧ್ಯಕ್ಷ ಡಾ. ಜಿ.ಕೆ. ಕಾಳೆ ಮಾತನಾಡಿ, ಶ್ರೀ ಗುರುದತ್ತಾತ್ರೇಯರ ಪ್ರೇರಣೆಯಿಂದ ಮಂಗಲ ಭವನ ನಿರ್ಮಾಣದ ಸಂಕಲ್ಪ ಕೈಗೊಂಡಿದ್ದು, ಭಕ್ತರ ಸಹಕಾರದಿಂದ ಈ ಕಾರ್ಯ ಯಶಸ್ವಿಯಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ವಿಶ್ವನಾಥಭಟ್ಟ ವೈದ್ಯ, ಅರುಣ ಗ್ರಾಮಪುರೋಹಿತ, ಅಜಿತ ಕುಲಕರ್ಣಿ, ನಾಗೇಶಭಟ್ಟ ಗ್ರಾಮಪುರೋಹಿತ, ಪ್ರಶಾಂತ ಗ್ರಾಮಪುರೋಹಿತ, ಡಾ. ನಾಗರಾಜ ಗ್ರಾಮಪುರೋಹಿತ, ಶ್ರೀಪಾದಭಟ್ಟ ಜೋಷಿ, ಪ್ರಕಾಶ ಕುಲಕರ್ಣಿ, ಬಿ.ಎಲ್. ಕುಲಕರ್ಣಿ ಸೇರಿದಂತೆ ದತ್ತಭಕ್ತ ಮಂಡಳಿಯ ಪದಾಧಿಕಾರಿಗಳು ಹಾಗೂ ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡಿದ್ದರು.

## ಬಳ್ಳಾರಿ ಜಿಲ್ಲೆಯಲ್ಲಿ ಶೇ.97.26ರಷ್ಟು ಎಸ್.ಐ.ಆರ್ ಗಣತಿ ನಮೂನೆ ವಿತರಣೆ

**ವಿಜಯಸಾಕ್ಷಿ ಸುದ್ದಿ, ಬಳ್ಳಾರಿ**

ಬಳ್ಳಾರಿ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಮತ್ತು ಮನೆ ಮನೆ ಸಮೀಕ್ಷೆ ಕಾರ್ಯವು ಅತ್ಯಂತ ತೀವ್ರಗತಿಯಲ್ಲಿ ಪ್ರಗತಿಯಲ್ಲಿದ್ದು, ಶುಕ್ರವಾರದ ಅಂತ್ಯಕ್ಕೆ ಜಿಲ್ಲೆಯಲ್ಲಿ ಒಟ್ಟು 11,95,880 (ಶೇ. 97.26) ಎಸ್ಐಆರ್ ಗಣತಿ ನಮೂನೆಗಳನ್ನು ಯಶಸ್ವಿಯಾಗಿ ವಿತರಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರು ತಿಳಿಸಿದ್ದಾರೆ. ಪ್ರಸ್ತುತ ಜಿಲ್ಲೆಯಲ್ಲಿ ಒಟ್ಟು 12,29,586 ಜನ ಅರ್ಹ ಮತದಾರರಿದ್ದು, ಈ ಪೈಕಿ ಶೇಕಡಾ 97.83 ರಷ್ಟು ಮತದಾರರನ್ನು ಯಶಸ್ವಿಯಾಗಿ ಮ್ಯಾಪಿಂಗ್ ಮಾಡಲಾಗಿದೆ. ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿಯೂ ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ನಿಖರವಾದ ಮಾಹಿತಿ ಸಂಗ್ರಹಣೆಯಲ್ಲಿ ನಿರತರಾಗಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಮತದಾರರ ಪಟ್ಟಿಯ ಗಣಕೀಕರಣ ಮತ್ತು ಕ್ಷೇತ್ರ ಮಟ್ಟದ ಪರಿಶೀಲನೆಗಾಗಿ ನಿಯೋಜಿಸಲಾಗಿರುವ ನಮೂನೆಗಳನ್ನು ಈಗಾಗಲೇ ಮುದ್ರಿಸಿ, ಬೂತ್ ಮಟ್ಟದ ಅಧಿಕಾರಿಗಳಿಗೆ ವಿತರಿಸಲಾಗಿದೆ. ಈ ಮನೆ ಮನೆ ಸಮೀಕ್ಷೆ ಹಾಗೂ ಡಿಜಿಟಲೀಕರಣ ಪ್ರಕ್ರಿಯೆಯು ಜುಲೈ 29 ರವರೆಗೆ ಮುಂದುವರಿಯಲಿದೆ ಎಂದಿದ್ದಾರೆ.

## ಕನಸು ದೊಡ್ಡದಿರಲಿ...ಸಾಧನೆ ಅದಕ್ಕಿಂತ ದೊಡ್ಡದಿರಲಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ವಿದ್ಯಾರ್ಥಿಗಳು ಜೀವನದಲ್ಲಿ ಉನ್ನತ ಗುರಿಯನ್ನು ಹೊಂದಿ ಕಠಿಣ ಪರಿಶ್ರಮ ಹಾಗೂ ನಿರಂತರ ಅಧ್ಯಯನದ ಮೂಲಕ ಯಶಸ್ಸಿನ ಶಿಖರ ತಲುಪಬೇಕು ಎಂದು ಮಾಜಿ ಶಾಸಕ ನಂದಿಹಳ್ಳಿ ಹಾಲಪ್ಪ ಕರೆ ನೀಡಿದರು.

ಪಟ್ಟಣದ ಹರಹರ ದೇವಸ್ಥಾನದಲ್ಲಿ ಚಾಣಕ್ಯ ಕರಿಯರ್ ಅಕಾಡೆಮಿ ಹಾಗೂ ಶಾಸಕ ಕೆ. ನೇಮರಾಜ ನಾಯ್ಕ ಅವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳ 10 ದಿನಗಳ ಉಚಿತ ತರಬೇತಿ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಸರ್ಕಾರಿ ಉದ್ಯೋಗ ಪಡೆಯಲು ನಿರಂತರ ಶ್ರಮ ಮತ್ತು ಗುರಿ ಸ್ಪಷ್ಟವಾಗಿರಬೇಕು. ದೊಡ್ಡ ಕನಸು ಕಂಡು ಅದನ್ನು ಸಾಕಾರಗೊಳಿಸಲು ವಿದ್ಯಾರ್ಥಿಗಳು ಶ್ರಮಿಸಬೇಕು ಎಂದು ಸಲಹೆ ನೀಡಿದರು.


ಅಕಾಡೆಮಿ ಮುಖ್ಯಸ್ಥ ಪ್ರದೀಪ್ ಗುಡ್ಡದ ಪ್ರಾಸ್ತಾವಿಕವಾಗಿ ಮಾತನಾಡಿ, 2017ರಲ್ಲಿ ಆರಂಭವಾದ ಚಾಣಕ್ಯ ಕರಿಯರ್ ಅಕಾಡೆಮಿಯಲ್ಲಿ ಇದುವರೆಗೆ 6 ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳು ತರಬೇತಿ ಪಡೆದು ವಿವಿಧ ಸರ್ಕಾರಿ ಹುದ್ದೆಗಳನ್ನು ಅಲಂಕರಿಸಿದ್ದಾರೆ.

ಐಎಎಸ್, ಐಪಿಎಸ್, ಕೆಎಎಸ್, ಕೆಪಿಎಸ್ ಹಾಗೂ ಪಿಎಸ್ಐ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ನೀಡಲಾಗುತ್ತಿದೆ ಎಂದರು. ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ಉಚಿತ ಊಟ ಮತ್ತು ವಸತಿ ವ್ಯವಸ್ಥೆ ಕಲ್ಪಿಸಿರುವ ಶಾಸಕ ಕೆ. ನೇಮರಾಜ ನಾಯ್ಕ ಹಾಗೂ ಹರಹರ ದೇವಸ್ಥಾನ ಸಮಿತಿಯನ್ನು ಅಭಿನಂದಿಸಿದರು. ಹರಹರ ದೇವಸ್ಥಾನ ಸಮಿತಿ ಅಧ್ಯಕ್ಷ ಅಕ್ಕಿಶಿವಣ್ಣ ಮಾತನಾಡಿ, ಏಕಾಗ್ರತೆ ಮತ್ತು ನಿರಂತರ ಪರಿಶ್ರಮದಿಂದ ಮಾತ್ರ ಯಶಸ್ಸು ಸಾಧ್ಯ ಎಂದರು.

ನಂದೀಪುರ ಸುಕ್ಷೇತ್ರದ ಡಾ. ಮಹೇಶ್ವರ ಸ್ವಾಮೀಜಿ ಆಶೀರ್ವಚನ ನೀಡಿದರು. ಹಾಲಸ್ವಾಮಿ ಮಠದ ಹಾಲಸಿದ್ದೇಶ್ವರ ಸ್ವಾಮೀಜಿ, ನವಲಿ ಮಠದ ರುದ್ರಮುನಿ ಸ್ವಾಮೀಜಿ ಹಾಗೂ ಕಡಲಬಾಳು ಗವಿಮಠದ ಮರಿ ಶಾಂತವೀರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

ಕಾರ್ಯಕ್ರಮದಲ್ಲಿ ದೇವಿಪ್ರಸಾದ್, ಕಿನ್ನಾಳ್ ಸುಭಾಷ್, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ ಟಿ. ವೆಂಕೋಬಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಗವಿಸಿದ್ದೇಶ ಕಾರ್ಯಕ್ರಮ ನಿರೂಪಿಸಿದರು. ಶಿಬಿರದಲ್ಲಿ 1,000ಕ್ಕೂ ಹೆಚ್ಚು ಪ್ರಶಿಕ್ಷಣಾರ್ಥಿಗಳು ಭಾಗವಹಿಸಿದ್ದರು.

## ಸೇವೆಯಲ್ಲೇ ಸಾರ್ಥಕತೆ ಕಂಡ ಇನ್ನರ್ ವೀಲ್!




**ವಿಜಯಸಾಕ್ಷಿ ಸುದ್ದಿ, ಗದಗ**

ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ನಡೆದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದ ಅಂಗವಾಗಿ ವಿವಿಧ ಸಮಾಜಮುಖಿ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಲಾಯಿತು.

ಆರ್ಥಿಕವಾಗಿ ಹಿಂದುಳಿದ ಶ್ರವಣ ದೋಷ ಉಳ್ಳ ವಿದ್ಯಾರ್ಥಿನಿ ಪಲ್ಲವಿ ಭಾನಾಪುರ ಅವರಿಗೆ ಶಿಕ್ಷಣ ಮುಂದುವರಿಸಲು ಅಗತ್ಯ ಪಠ್ಯಪೂರಕ ಸಾಮಗ್ರಿಗಳನ್ನು ವಿತರಿಸಲಾಯಿತು. ಬಡ ರೈತ ಮಹಿಳೆ ಪದ್ಮಾವತಿ ಡೊಂಗಡೆ ಅವರಿಗೆ ಕೃಷಿಗೆ ನೆರವಾಗುವಂತೆ ಬೀಜಗಳನ್ನು ವಿತರಿಸಿದರೆ, ಮತ್ತೊಬ್ಬ ಮಹಿಳೆ ಶೈಲಾ ಅಂಗಡಿ ಅವರಿಗೆ ದೈನಂದಿನ ಜೀವನಕ್ಕೆ ನೆರವಾಗುವ ಉದ್ದೇಶದಿಂದ ಮಿಕ್ಸರ್ ಗ್ರೈಂಡರ್ ನೀಡಲಾಯಿತು.

ಈ ಸಂದರ್ಭದಲ್ಲಿ ಡಿಇಎಸ್ಒ ವಿರಾಜ ಕೋಟಕ್ ಅವರು ಕ್ಲಬ್‌ನ ಸೇವಾ ಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು. ಪಿಡಿಸಿ ಪ್ರೇಮಾ ಗುಳಗೌಡರ ಉಪಸ್ಥಿತಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ನಿಕಟಪೂರ್ವ ಅಧ್ಯಕ್ಷೆ ಅಶ್ವಿನಿ ಜಗತಾಪ್ ಸ್ವಾಗತಿಸಿದರು. ರೇಣುಕಾ ಅಮಾತ್ಯ ಪ್ರಾರ್ಥನೆ ನಡೆಸಿದರೆ, ಸುವರ್ಣ ಮದರಿಮಠ ಇನ್ನರ್ ವೀಲ್ ಪ್ರಾರ್ಥನೆ ನೆರವೇರಿಸಿದರು.

ಪ್ರಸಕ್ತ ಸಾಲಿನ ಅಧ್ಯಕ್ಷೆ ಮಂಜುಳಾ ಅಕ್ಕಿ ವಾರ್ಷಿಕ ಸೇವಾ ಯೋಜನೆಗಳನ್ನು ವಿವರಿಸಿದರು. ಕಾರ್ಯದರ್ಶಿ ಪೂಜಾ ಭೂಮಾ ವಂದಿಸಿದರು. ಜ್ಯೋತಿ ದಾನಪ್ಪಗೌಡರ ಹಾಗೂ ಸ್ಮಿತಾ ಹೊಸೂರ್ ಕಾರ್ಯಕ್ರಮ ನಿರ್ವಹಿಸಿದರು.

### ದತ್ತು ಸ್ವೀಕಾರ ಕೇಂದ್ರದ ಆಯಾಗಳಿಗೆ ಶಿಶು ಆರೈಕೆ ಕುರಿತು ವಿಶೇಷ ತರಬೇತಿಯಲ್ಲಿ ಡಾ. ಶಿವನಗೌಡ್ರ

# ತಾಯಿಹಾಲಿಗೆ ಪರ್ಯಾಯವೇ ಇಲ್ಲ



**ವಿಜಯಸಾಕ್ಷಿ ಸುದ್ದಿ, ಗದಗ**

ತಾಯಿಹಾಲೇ ನವಜಾತ ಶಿಶುಗಳಿಗೆ ಅತ್ಯುತ್ತಮ ಆಹಾರವಾಗಿದ್ದು, ಮಕ್ಕಳ ಆರೋಗ್ಯಕರ ಬೆಳವಣಿಗೆ ಹಾಗೂ ಬುದ್ಧಿವಿಕಾಸಕ್ಕೆ ಅದಕ್ಕಿಂತ ಉತ್ತಮ ಪರ್ಯಾಯವಿಲ್ಲ ಎಂದು ಮಕ್ಕಳ ತಜ್ಞ ಡಾ. ಶಿವನಗೌಡ್ರ ಜೋಳದರಾಶಿ ಹೇಳಿದರು.

ಬೆಟಗೇರಿಯ ಸೇವಾ ಭಾರತಿ ಟ್ರಸ್ಟ್ (ರಿ) ಅಮೂಲ್ಯ (ಪಿ) ವಿಶೇಷ ದತ್ತು ಸ್ವೀಕಾರ ಕೇಂದ್ರದಲ್ಲಿ ಮಕ್ಕಳ ಆರೋಗ್ಯ ತಪಾಸಣೆ ನಡೆಸಿದ ಬಳಿಕ ಆಯಾಗಳಿಗೆ ನವಜಾತ ಶಿಶುಗಳ ಆರೈಕೆ ಕುರಿತು ವಿಶೇಷ ತರಬೇತಿ ನೀಡಿ ಅವರು ಮಾತನಾಡಿದರು.

ಪೌಡರ್ ಹಾಲಿನಲ್ಲಿ ಪೌಷ್ಟಿಕಾಂಶಗಳಿದ್ದರೂ ಅದು ತಾಯಿಹಾಲಿಗೆ ಸಮನಾಗುವುದಿಲ್ಲ. ತಾಯಿ ಇಲ್ಲದಿರುವುದು, ತಾಯಿಗೆ ಆರೋಗ್ಯ ಸಮಸ್ಯೆ ಇರುವುದು ಅಥವಾ ವಿಶೇಷ ವೈದ್ಯಕೀಯ ಕಾರಣಗಳಿದ್ದಾಗ ಮಾತ್ರ ವೈದ್ಯರ ಸಲಹೆಯಂತೆ ಪೌಡರ್ ಹಾಲು ಬಳಸಬೇಕು ಎಂದು ಅವರು ತಿಳಿಸಿದರು.

ವೈದ್ಯರ ಸಲಹೆ ಇಲ್ಲದೆ ಮೆಡಿಕಲ್ ಅಂಗಡಿಗಳಿಂದ ಪೌಡರ್ ಹಾಲು ಖರೀದಿಸಿ ಮಕ್ಕಳಿಗೆ ನೀಡುವುದು ಸೂಕ್ತವಲ್ಲ. ಪೌಡರ್ ಹಾಲನ್ನು ಸಾಮಾನ್ಯ ಆಹಾರವೆಂದು ಪರಿಗಣಿಸದೆ ಔಷಧಿಯಂತೆ ವೈದ್ಯರ ಸೂಚನೆಯ ಮೇರೆಗೆ ಮಾತ್ರ ಬಳಸಬೇಕು ಎಂದು ಅವರು ಸಲಹೆ ನೀಡಿದರು.

**ತಾಯಿಹಾಲು ಪ್ರಕೃತಿಯ ಅಮೂಲ್ಯ ಕೊಡುಗೆ. ವೈದ್ಯರ ಸಲಹೆಯಿಲ್ಲದೆ ಪೌಡರ್ ಹಾಲು ಬಳಸಬಾರದು. ತಾಯಿಹಾಲೇ ಮಗುವಿನ ಆರೋಗ್ಯ, ರೋಗನಿರೋಧಕ ಶಕ್ತಿ ಮತ್ತು ಬುದ್ಧಿವಿಕಾಸಕ್ಕೆ ಭದ್ರ ಅಡಿಪಾಯ ಹಾಕುತ್ತದೆ.**

**- ಡಾ. ಶಿವನಗೌಡ್ರ ಜೋಳದರಾಶಿ,**
ಮಕ್ಕಳ ತಜ್ಞ

ದತ್ತು ಸ್ವೀಕಾರ ಕೇಂದ್ರದ ಆಯಾಗಳು ಮಕ್ಕಳನ್ನು ತಾಯಿಯಂತೆ ಆರೈಕೆ ಮಾಡುತ್ತಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ದತ್ತು ಕೇಂದ್ರದ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ಮಾತನಾಡಿ, ದತ್ತು ಕೇಂದ್ರದ ಮಕ್ಕಳ ಆರೋಗ್ಯ ತಪಾಸಣೆ ಹಾಗೂ ಮಾರ್ಗದರ್ಶನದಲ್ಲಿ ಡಾ. ಶಿವನಗೌಡ್ರ ಅವರ ಸೇವೆ ಅಮೂಲ್ಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಡಾ. ಶಿವನಗೌಡ್ರ ಜೋಳದರಾಶಿ ಮತ್ತು ಶ್ವೇತಾ ಜೋಳದರಾಶಿ ದಂಪತಿ ಕೇಂದ್ರದ ಆಯಾಗಳನ್ನು ಉಡುಗೊರೆ ನೀಡಿ ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಡಾ. ತೇಜಸ್ವಿನಿ ಹಿರೇಮಠ, ರತ್ನಾ ಜೋಳದರಾಶಿ, ನಾಗವೇಣಿ ಕಟ್ಟಿಮನಿ, ಲಲಿತಾಬಾಯಿ ಮೇರವಾಡೆ, ನರಸಿಂಹ ಕಾಮಾರ್ತಿ, ಗುರುಸಿದ್ಧಪ್ಪ ಕೊಣ್ಣೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಇಂದು ರಾಜ್ಯದ ಎಲ್ಲಾ ಉಪನೋಂದಣಿ ಕಚೇರಿಗಳು ಕರ್ತವ್ಯ ನಿರ್ವಹಣೆ

**ವಿಜಯಸಾಕ್ಷಿ ಸುದ್ದಿ, ಬಳ್ಳಾರಿ**

ರಾಜ್ಯದಾದ್ಯಂತ ಇರುವ ಎಲ್ಲಾ ಉಪ ನೋಂದಣಿ ಕಚೇರಿಗಳು 2026 ನೇ ಜುಲೈ 12 ರ ಭಾನುವಾರದಂದು ಸಾವ ರ್ಜನಿಕ ರಜಾ ದಿನವಾಗಿದ್ದರೂ ಸಹ, ಸಾರ್ವಜನಿಕರ ಅನುಕೂಲಕ್ಕಾಗಿ ಮತ್ತು ಇಲಾಖೆಯ ಕಾರ್ಯದೊತ್ತಡ ನಿವಾರಣೆಗಾಗಿ ಎಂದಿನಂತೆ ತೆರೆದಿದ್ದು, ಪೂರ್ಣ ಪ್ರಮಾಣ ದಲ್ಲಿ ಕಾರ್ಯನಿರ್ವಹಿಸಲಿವೆ.

## ಮನೆ ಮನೆಗೆ ಎಸ್ಐಆರ್ ಪರಿಶೀಲನೆ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಚುನಾವಣಾ ಆಯೋಗದ ನಿರ್ದೇಶನದಂತೆ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐರ್ಆ) ಕಾರ್ಯಕ್ಕೆ ವೇಗ ನೀಡುವ ಉದ್ದೇಶದಿಂದ ನರೇಗಲ್ಲ ಸಮೀಪದ ಜಕ್ಕಲಿ ಗ್ರಾಮಕ್ಕೆ ಸಿಡಿಪಿಒ ಲಲಿತಾ ಅಳವಂಡಿ ಭೇಟಿ ನೀಡಿ, ಮನೆ ಮನೆಗೆ ನಡೆಯುತ್ತಿರುವ ಮತದಾರರ ಮಾಹಿತಿ ಸಂಗ್ರಹ ಹಾಗೂ ದಾಖಲೆ ಪರಿಶೀಲನೆ ಕಾರ್ಯವನ್ನು ಅವಲೋಕಿಸಿದರು.

ಗ್ರಾಮದ ವಿವಿಧ ಮನೆಗಳಿಗೆ ಭೇಟಿ ನೀಡಿದ ಅವರು, ಹೆಸರು ಸೇರ್ಪಡೆ, ತಿದ್ದುಪಡಿ, ಸ್ಥಳಾಂತರಗೊಂಡ ಮತದಾರರ ಮಾಹಿತಿ ಸಂಗ್ರಹ ಮತ್ತು ದಾಖಲೆ ಪರಿಶೀಲನೆ ಪ್ರಕ್ರಿಯೆಯನ್ನು ಪರಿಶೀಲಿಸಿ, ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸಿಬ್ಬಂದಿಗೆ ಸೂಚಿಸಿದರು.

ಈ ವೇಳೆ ಪತ್ರಕರ್ತ ಸಂಗಮೇಶ ಮೆಣಸಗಿ ಅವರ ನಿವಾಸಕ್ಕೂ ಭೇಟಿ ನೀಡಿದ ಲಲಿತಾ ಅಳವಂಡಿ, ಎಸ್ಐಆರ್ ನಮೂನೆ ಹಾಗೂ ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ಸ್ವೀಕರಿಸಿದರು. ಅರ್ಹ ಮತದಾರರು ಯಾರೂ ಪಟ್ಟಿಯಿಂದ ಹೊರಗುಳಿಯದಂತೆ ಸಾರ್ವಜನಿಕರು ಅಗತ್ಯ ದಾಖಲೆಗಳನ್ನು ನೀಡಿ ಸಹಕರಿಸಬೇಕು ಎಂದು ಮನವಿ ಮಾಡಿದರು.

ಪರಿಶೀಲನೆ ವೇಳೆ ಪಿಡಿಒ ಬಿ.ಎನ್. ಬಚ್ಚನಹಳ್ಳಿ, ಗ್ರಾಮ ಆಡಳಿತಾಧಿಕಾರಿ ಜಗದೀಶ ತೊಗರಿಕಟ್ಟಿ, ಬಿಎಲ್ಒ ಮುತ್ತಣ್ಣ ತಾಳಿಕೋಟಿ, ಗ್ರಾಮ ಪಂಚಾಯಿತಿ ಬಿಲ್ ಕಲೆಕ್ಟರ್ ಸೋಮಶೇಖರಯ್ಯ ಓದುಸೂಮಠ, ಬಿಎಲ್ಎ ಬಸವರಾಜ ಆದಿ ಸೇರಿದಂತೆ ಸಿಬ್ಬಂದಿ ಉಪಸ್ಥಿತರಿದ್ದರು.

## ಬೆಳೆ ಸಮೀಕ್ಷೆ ಕಡ್ಡಾಯ: ಆ್ಯಪ್‌ನಲ್ಲಿ ವಿವರ ದಾಖಲಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಈಗಾಗಲೇ ಆರಂಭವಾಗಿದ್ದು, ರೈತರು ತಮ್ಮ ಜಮೀನಿನಲ್ಲಿ ಬೆಳೆದಿರುವ ಬೆಳೆಗಳ ವಿವರಗಳನ್ನು ಮುಂಗಾರು ರೈತರ ಬೆಳೆ ಸಮೀಕ್ಷೆ2026 ಮೊಬೈಲ್ ಆ್ಯಪ್ ಮೂಲಕ ಕಡ್ಡಾಯವಾಗಿ ದಾಖಲಿಸಬೇಕು ಎಂದು ಕೃಷಿ ಇಲಾಖೆ ತಿಳಿಸಿದೆ.

ಗೂಗಲ್ ಪ್ಲೇ ಸ್ಟೋರ್‌ನಿಂದ ಆ್ಯಪ್ ಡೌನ್‌ಲೋಡ್ ಮಾಡಿಕೊಂಡು ರೈತರು ತಾವೇ ಖುದ್ದಾಗಿ ಬೆಳೆ ವಿವರಗಳನ್ನು ಅಪ್‌ಲೋಡ್ ಮಾಡಬಹುದಾಗಿದೆ.

ಇದರಿಂದ ಕನಿಷ್ಠ ಬೆಂಬಲ ಬೆಲೆ (MSP), ಬೆಳೆ ವಿಮೆ, ಬರ ಹಾಗೂ ಪ್ರವಾಹ ಪರಿಹಾರ, ಪಹಣಿಯಲ್ಲಿ ಬೆಳೆ ವಿವರ ದಾಖಲಾತಿ ಮತ್ತು ಬೆಳೆಸಾಲ ಸೇರಿದಂತೆ ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗಲಿದೆ.

ಬೆಳೆ ವಿವರಗಳನ್ನು ದಾಖಲಿಸದ ರೈತರು ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನಗಳಿಂದ ವಂಚಿತರಾಗುವ ಸಾಧ್ಯತೆ ಇರುವುದರಿಂದ ತಕ್ಷಣವೇ ಬೆಳೆ ಸಮೀಕ್ಷೆ ಪೂರ್ಣಗೊಳಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ಮನವಿ ಮಾಡಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಗ್ರಾಮದ ಕೃಷಿ, ತೋಟಗಾರಿಕೆ, ಕಂದಾಯ, ರೇಷ್ಮೆ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಬಹುದು ಅಥವಾ 1800 425 3553 ಸಹಾಯವಾಣಿಗೆ ಕರೆ ಮಾಡಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka